ಸಂಪುಟ : ೯ ಸಂಚಿಕೆ ೬೬ ಪುಟ : ೪ ಬೆಲೆ: ೩.೦೦ ಶನಿವಾರ ಏಪ್ರಿಲ್ 13 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 66 Pages : 4 Price : 3.00 Saturday April 13 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಉಪ ಕಾನೂನು ನೆರವು ಅಭಿರಕ್ಷಕರ ಹುದ್ದೆಗಾಗಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಡಿಯಲ್ಲಿ ಸ್ಥಾಪಿಸಿದ ಕಾನೂನು ನೆರವು ಅಭಿರಕ್ಷಕರ ಕಚೇರಿಯಲ್ಲಿ ಖಾಲಿ ಇರುವ ಉಪ ಕಾನೂನು ನೆರವು ಅಭಿರಕ್ಷಕರ (ಡೆಪ್ಯುಟಿ ಚೀಫ್ ಲೀಗಲ್ ಏಡ್ ಡಿಫೆನ್ಸ್ ಕೌನ್ಸಿಲ್ ) ಒಂದು ಹುದ್ದೆಯನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಭರ್ತಿ ಮಾಡಿ ಅವಶ್ಯಕ ದಾಖಲೆಗಳನ್ನು ಸ್ವತ: ದೃಢೀಕರಿಸಿ ಲಗತ್ತಿಸಿ ಎಪ್ರಿಲ್ 24 ರ ಸಂಜೆ 5 ಗಂಟೆಯೊಳಗಾಗಿ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾದಿಕಾರ, ಜಿಲ್ಲಾ ನ್ಯಾಯಾಲಯದ ಸಂಕೀರ್ಣ , ಗದಗ ಕಚೇರಿಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾ ನ್ಯಾಯಾಲಯದ ಸೈಟ್ ჯಣಣಕಿ://ರಚಿಜಚಿರ.ಜಛಿರಣಡಿಣ.ರಠತ.ಟಿ ಮೂಲಕ ಅಥವಾ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯನ್ನು ಸಂಪರ್ಕಿಸುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ. ಗುರುಪ್ರಸಾದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿಸಿ ಗಾಳಿಯಿಂದ ಆರೋಗ್ಯ ಕಾಪಾಡಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ



ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ತಾಪಮಾನ ಏರುತ್ತಿದ್ದು, ಸೂರ್ಯನ ಪ್ರಖರತೆ ಹೆಚ್ಚಾಗಿರುವುದರಿಂದ ಉಂಟಾಗುವ ಸಂಭಾವ್ಯ ಆರೋಗ್ಯದ ಅಪಾಯಗಳನ್ನು ತಗ್ಗಿಸಲು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನೀಲಗುಂದ ಮನವಿ ಮಾಡಿದ್ದಾರೆ.

ಸಾಧ್ಯವಾದಷ್ಟು ಮಟ್ಟಿಗೆ ವಿಶೇಷವಾಗಿ ಗರಿಷ್ಠ ತಾಪಮಾನದ ಅವಧಿಯಲ್ಲಿ ಬಿಸಿಲಿನಲ್ಲಿ ಹೋಗುವುದನ್ನು ತಪ್ಪಿಸುವುದು(ಮಧ್ಯಾಹ್ನ 12ರಿಂದ 3 ಗಂಟೆಯವರೆಗೆ), ಸಡಿಲವಾದ ತಿಳಿ ಬಣ್ಣದ ಹತ್ತಿಯ ಬಟ್ಟೆಗಳನ್ನು ಧರಿಸುವುದು, ಬಿಸಿಲಿನಲ್ಲಿ ಹೋಗುವಾಗ ರಕ್ಷಣೆಗಾಗಿ ಛತ್ರಿ, ಕನ್ನಡಕ, ಟೋಪಿ ಮತ್ತು ಕಾಲಿಗೆ ಪಾದರಕ್ಷೆಗಳನ್ನು ಧರಿಸುವುದು, ಹೆಚ್ಚು ನೀರನ್ನು ಕುಡಿಯುವುದು, ಮಜ್ಜಿಗೆ/ಎಳನೀರು, ಹಣ್ಣಿನ ರಸ, ಓಆರ್‌ಎಸ್ ಮುಂತಾದ ದ್ರವ ಪದಾರ್ಥಗಳನ್ನು ಸೇವಿಸುವುದು.

ಹೊರಗಿನ ಉಷ್ಣತೆಯು ಅಧಿಕವಾಗಿರುವಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸುವುದು. ಪ್ರಯಾಣ ಮಾಡುವಾಗ ನೀರನ್ನು ಜೊತೆಯಲ್ಲಿ ಒಯ್ಯುವುದು, ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಚಹಾ, ಕಾಫಿ ಮತ್ತು ಕಾರ್ಬೋನೇಟೆಡ್ ತಂಪು ಪಾನೀಯಗಳ ಸೇವನೆ ತಪ್ಪಿಸುವುದು.

ಬಿಸಿಲಿನಲ್ಲಿ ನಿಲ್ಲಿಸಿದ ವಾಹನಗಳಲ್ಲಿ ಮಕ್ಕಳನ್ನು ಅಥವಾ ಸಾಕು ಪ್ರಾಣಿಗಳನ್ನು ಬಿಡದಿರುವುದು. ಮನೆಯನ್ನು ತಂಪಾಗಿಸಲು ಪರದೆಗಳು, ಮೇಲ್ಛಾವಣಿ ಅಥವಾ ಸನ್‌ಶೇಡ್‌ಗಳನ್ನು ಬಳಸುವುದು. ಬಿಸಿಗಾಳಿ ಮತ್ತು ಅತಿಯಾದ ತಾಪಮಾನದಿಂದ ಆರೋಗ್ಯ ಸಮಸ್ಯೆ ಉಂಟಾದಲ್ಲಿ ಸಮೀಪದ ಆರೋಗ್ಯ ಕೇಂದ್ರವನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ನೀಲಗುಂದ ಕೋರಿದ್ದಾರೆ.

### 'ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ' ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್

# ನೀರು ಪೂರೈಕೆಯಲ್ಲಿ ವ್ಯತ್ಯಯವಾಗದಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಬಿಸಿಲು ಹೆಚ್ಚಾಗುತ್ತಿದ್ದು, ಮುಂಗಾರು ಆರಂಭದವರೆಗೆ ಗ್ರಾಮೀಣ, ಪಟ್ಟಣ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗದಂತೆ ಗಮನಹರಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಸ್ಪಷ್ಟ ನಿರ್ದೇಶನ ನೀಡಿದರು.

ಗದಗ ಜಿಲ್ಲೆಯಲ್ಲಿ ಕುಡಿಯುವ ನೀರು ನಿರ್ವಹಣೆ, ಮೇವಿನ ಪೂರೈಕೆ, ಬಿಸಿಗಾಳಿ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ 'ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ' ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತುಂಗಭದ್ರಾ ಮತ್ತು ಮಲಪ್ರಭಾ ನದಿ ಮೂಲಗಳಿಂದ, ಟ್ಯಾಂಕರ್ ಮೂಲಕ, ಬೋರ್‌ವೆಲ್ ಹೀಗೆ ವಿವಿಧ ಮೂಲಗಳಿಂದ ಕುಡಿಯುವ ನೀರು ಪೂರೈಸಲಾಗುತ್ತಿದ್ದು, ಈ ಬಗ್ಗೆ ಗಮನ ಹರಿಸಬೇಕು ಎಂದು ತಿಳಿಸಿ, ಕುಡಿಯುವ ನೀರು ಸಂಗ್ರಹ ಮತ್ತಿತರ ವಿಚಾರಗಳ ಬಗ್ಗೆ ಅಧಿಕಾರಿಗಳೊಂದಿಗೆ ಜಿಲ್ಲಾಧಿಕಾರಿಗಳು ಸುದೀರ್ಘವಾಗಿ ಚರ್ಚಿಸಿದರು.



ಕುಡಿಯುವ ನೀರು ಪೂರೈಕೆ ಸ್ಥಿತಿಗತಿ ಬಗ್ಗೆ ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು, ಕುಡಿಯುವ ನೀರು ಸರಬರಾಜಿನಲ್ಲಿ ಸಾರ್ವಜನಿಕರಿಂದ ದೂರು ಬಾರದಂತೆ ಗಮನ ಹರಿಸುವುದು ಅಧಿಕಾರಿಗಳ ಪ್ರಥಮ ಆದ್ಯತೆ ಆಗಬೇಕು. ಕುಡಿಯುವ ನೀರಿನ ಪೂರೈಕೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ತಾಕೀತು ಮಾಡಿದರು.

ಖಾಸಗಿ ಕೊಳವೆ ಬಾವಿಗಳ ಮೂಲಕ ಕುಡಿಯುವ ನೀರು ಪೂರೈಕೆಗೆ ಕ್ರಮ ವಹಿಸಬೇಕು. ತಾಲೂಕು ಮಟ್ಟದಲ್ಲಿ ತಹಸೀಲ್ದಾರರು, ತಾಲೂಕು ಪಂಚಾಯತ್ ಇ.ಒಗಳು, ಸ್ಥಳೀಯ ಸಂಸ್ಥೆಯ ಮುಖ್ಯಾಧಿಕಾರಿಗಳು ಹಾಗೂ ಪಿಡಿಒಗಳ ಜೊತೆ ಸಭೆ ನಡೆಸಿ ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಎಚ್ಚರ ವಹಿಸಬೇಕು. ಕುಡಿಯುವ ನೀರು ಪೂರೈಕೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಅವರು ಸೂಚಿಸಿದರು.

ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಕೆ ಸಂಬಂಧ ಟ್ಯಾಂಕರ್‌ಗಳಿಗೆ ಕಡ್ಡಾಯವಾಗಿ ಜಿಪಿಎಸ್ ಅಳವಡಿಸಬೇಕು. ಕುಡಿಯುವ ನೀರು ಪೂರೈಕೆ ಸಂದರ್ಭದಲ್ಲಿ ಛಾಯಾಚಿತ್ರ ಸಹಿತ ಮಾಹಿತಿ ಒದಗಿಸಬೇಕು. ಜಾನುವಾರುಗಳಿಗೆ ಮೇವು ಪೂರೈಕೆಯಲ್ಲಿ ವ್ಯತ್ಯಯ ಆಗಬಾರದು. ಜಿಲ್ಲೆಯ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಮೇವು ಪೂರೈಕೆಯನ್ನು ಸರಿಯಾಗಿ ನಿಭಾಯಿಸಬೇಕು ಎಂದು ಅವರು ಇದೇ ಸಂದರ್ಭದಲ್ಲಿ ಸೂಚಿಸಿದರು.

ಜಿ.ಪಂ ಸಿಇಒ ಎಸ್.ಭರತ್ ಮಾತನಾಡಿ, ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರು ಪೂರೈಕೆ ಸಂಬಂಧಿಸಿದಂತೆ ಹಲವು ಕಡೆ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಲಾಗುತ್ತಿದೆ. ತಾ.ಪಂ ಇಒಗಳು ಕುಡಿಯುವ ನೀರು ಪೂರೈಕೆ ಬಗ್ಗೆ ವಿಶೇಷ ಗಮನಹರಿಸಬೇಕು ಎಂದು ಸೂಚಿಸಿದರು.

> ಕುಡಿಯುವ ನೀರು ಪೂರೈಕೆಯಲ್ಲಿನ ನಿರ್ವಹಣೆಯನ್ನು ಸರಿಯಾಗಿ ನಿಭಾಯಿಸಬೇಕು. ಪೈಪ್‌ಲೈನ್‌ಗಳನ್ನು ಆಗಾಗ ಪರಿಶೀಲಿಸಬೇಕು. ಕುಡಿಯುವ ನೀರು ಪೂರೈಸುವುದರ ಜೊತೆಗೆ ಗುಣಮಟ್ಟದ ಬಗ್ಗೆಯೂ ಪ್ರತಿನಿತ್ಯ ಪರಿಶೀಲಿಸಬೇಕು. ಯಾವುದೇ ಕಾರಣಕ್ಕೂ ಉದಾಸೀನ ತೋರಬಾರದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಕಟ್ಟುನಿಟ್ಟಿನ ಸೂಚನೆ ನೀಡಿದರು.

ತಹಸೀಲ್ದಾರರು, ತಾ.ಪಂ ಇ.ಒಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ತಮ್ಮ ವ್ಯಾಪ್ತಿಯ ಕುಡಿಯುವ ನೀರು ಪೂರೈಕೆ ಸಂಬಂಧಿಸಿದಂತೆ ಮಾಹಿತಿ ನೀಡಿದರು. ನೀರಾವರಿ ಇಂಜನಿಯರ್‌ಗಳು ತುಂಗಭದ್ರ ಹಾಗೂ ಮಲಪ್ರಭ ನದಿಗಳಲ್ಲಿನ ನೀರು ಸಂಗ್ರಹ ಬಗ್ಗೆ ಮಾಹಿತಿ ನೀಡಿದರು.

ಹೆಚ್ಚುವರಿ ಪೊಲೀಸ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ, ಉಪ ವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ನಗರಸಭೆ ಪೌರಾಯುಕ್ತ ಪ್ರಶಾಂತ್ ವರಗಪ್ಪನವರ, ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

### ಖಜಾನೆ ಖಾಲಿ ಮಾಡಿರುವ ರಾಜ್ಯದ ದರಿದ್ರ ಕಾಂಗ್ರೆಸ್ ಸರ್ಕಾರ– ಬಸವರಾಜ ಬೊಮ್ಮಾಯಿ ಆರೋಪ

# ಗ್ಯಾರಂಟಿಗಾಗಿ ಅಲೆದು ಗೃಹಲಕ್ಷ್ಮೀಯರ ಚಪ್ಪಲಿ ಸವೆಯುತ್ತಿವೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರದ ಖಜಾನೆ ಸಂಪೂರ್ಣ ಖಾಲಿ ಆಗಿದೆ. ಒಂದು ನಯಾ ಪೈಸೆ ಈ ಸರ್ಕಾರ ಅಭಿವೃದ್ಧಿ ಮಾಡಿಲ್ಲ. ಇದೊಂದು ದರಿದ್ರ ಸರ್ಕಾರ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಗದಗ ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಅವರು ಶುಕ್ರವಾರ ಗದಗ ವಿಧಾನಸಭಾ ಕ್ಷೇತ್ರದ ಕುರ್ತಕೋಟಿ, ಹರ್ತಿ, ಕಣವಿ, ಹೊಸೂರು ಹಾಗೂ ಸೊರಟೂರು ಗ್ರಾಮಗಳಲ್ಲಿ ಮತಯಾಚನೆ ಮಾಡಿ ಮಾತನಾಡಿದರು.

ಗ್ರಾಮ ಪಂಚಾಯಿತಿಗೆ ರಸ್ತೆ, ದ್ವೀಪ ಹಾಕಿಸಿಕೊಡದಂತಹ ದುಃಸ್ಥಿತಿ ಈ ಸರ್ಕಾರದ್ದಾಗಿದೆ ಎಂದು ನಾವು ಹೇಳುತ್ತಿಲ್ಲ. ಕಾಂಗ್ರೆಸಿನ ಶಾಸಕರೇ ಹೇಳುತ್ತಿದ್ದಾರೆ. ಬರಗಾಲ ಬಂದಿದೆ. ಒಂದು ಬೆಳೆಯೂ ಬಂದಿಲ್ಲ. ರೈತರಿಗೆ ಬರ ಪರಿಹಾರ ನೀಡದೇ ಕೇಂದ್ರ ಸರ್ಕಾರದ ಕಡೆ ಬೆರಳು ಮಾಡಿ ತೋರಿಸುತ್ತಿದ್ದಾರೆ. ಇದೊಂದು ದರಿದ್ರ ಸರ್ಕಾರ. ಇಂತಹ ದರಿದ್ರ ಸರ್ಕಾರವನ್ನು ಹಿಂದೆಂದೂ ನಾನು ನೋಡಿಲ್ಲ ಎಂದರು.

ಈ ದೇಶದ ಚುನಾವಣೆ ನಡೆಯುವಂತಹ ಸಂದರ್ಭದಲ್ಲಿ ಯಾರು ಆಡಳಿತ ಪಕ್ಷದ ಚುಕ್ಕಾಣಿ ಹಿಡಿಯುತ್ತಾರೆ ಎನ್ನುವುದು ಮುಖ್ಯ. ಇದು ರಾಜ್ಯದ ಅಲ್ಲ. ಚುನಾವಣೆ ದೇಶದ ಚುನಾವಣೆಯಾಗಿದೆ. ಈ ಚುನಾವಣೆ ಫಲಿತಾಂಶ ರಾಜ್ಯದ ಮೇಲೂ ಆಗುತ್ತದೆ. ದೇಶ ಸುಭದ್ರವಾಗಿದ್ದರೆ, ರಾಜ್ಯ ಸುಭದ್ರವಾಗಿರುತ್ತದೆ. ರಾಜ್ಯ ಸುಭದ್ರವಾಗಿದ್ದರೆ ನಮ್ಮ ಹಳ್ಳಿ ಸುಭದ್ರವಾಗಿರುತ್ತವೆ. ಇಡೀ ದೇಶದಲ್ಲಿ, ವಿಶ್ವದಲ್ಲಿ ಪ್ರಖ್ಯಾತ ಆಗಿರುವಂತಹ ನಾಯಕರು ಅಂದರೆ, ಅದು ನರೇಂದ್ರ ಮೋದಿಯವರು. ಭಯೋತ್ಪಾದನೆ ಮುಕ್ತ ಭಾರತವನ್ನು ಮೋದಿ ಮಾಡಿದ್ದಾರೆ ಎಂದರು.

ಪ್ರಚಾರ ಸಂದರ್ಭದಲ್ಲಿ ಮಾಜಿ ಸಚಿವ ಸಿ.ಸಿ. ಪಾಟೀಲ್, ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ, ಜೆಡಿಎಸ್‌ನ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ, ಮುಖಂಡರಾದ ಎಂ.ಎಸ್ ಪರ್ವತಗೌಡ್ರ ಸೇರಿದಂತೆ ಅನೇಕರು ಹಾಜರಿದ್ದರು.



**ಡೊಳ್ಳು ಬಾರಿಸಿದ ಬೊಮ್ಮಾಯಿ**

ಕುರ್ತಕೋಟಿಯಲ್ಲಿ ಚುನಾವಣಾ ಪ್ರಚಾರ ಕಾರ್ಯ ಆರಂಭಿಸಿದ ಬಸವರಾಜ ಬೊಮ್ಮಾಯಿಯವರು ಮೆರವಣಿಗೆಯಲ್ಲಿ ಜಾನಪದ ಕಲಾವಿದರೊಂದಿಗೆ ಡೊಳ್ಳು ಬಾರಿಸಿ ಸಂಭ್ರಮ ಪಟ್ಟರು.

> ರಾಹುಲ್ ಗಾಂಧಿ ನಮ್ಮ ಪ್ರಧಾನಮಂತ್ರಿ ಅಭ್ಯರ್ಥಿ ಎಂದು ಕೆಲವರು ಹೇಳಿದರೆ, ಇನ್ನು ಕೆಲವರು ಮಲ್ಲಿಕಾರ್ಜುನ ಖರ್ಗೆ ಎನ್ನುತ್ತಾರೆ. ಇವರಿಗೆ ಸರಿಯಾದ ಅಭ್ಯರ್ಥಿ ಯಾರಾಗಬೇಕೆಂಬ ನಿರ್ಣಯವೇ ಕಾಂಗ್ರೆಸಿನಲ್ಲಿ ಇಲ್ಲ. ಗ್ಯಾರಂಟಿಗಳೆಲ್ಲಾ ನಶಿಸಿಹೋಗಿವೆ. ಗ್ಯಾರಂಟಿಗಾಗಿ ಅಲೆದು ಅಲೆದು ಜನ ಸಾಕಾಗಿದ್ದಾರೆ. ಗ್ಯಾರಂಟಿಗೆ ಅಲೆದು ಗೃಹಲಕ್ಷ್ಮೀಯರ ಚಪ್ಪಲಿ ಸವೆಯುತ್ತಿವೆ. ಬರಗೆಟ್ಟ ಗ್ಯಾರಂಟಿ ಇದು. ಸಿಎಂ ಸಿದ್ದರಾಮಯ್ಯ ಹತ್ತು ಕೆ.ಜಿ ಅಕ್ಕಿ ಕೊಡುತ್ತೇನೆ ಎಂದಿದ್ದರು ಒಂದು ಕಾಳು ಅಕ್ಕಿಕೂಡ ಕೊಡಲು ಸಾಧ್ಯವಾಗಲಿಲ್ಲ. ಈಗ ಕೊಡುತ್ತಿರುವ ಐದು ಕೆಜಿ ಅಕ್ಕಿಯೂ ಕೇಂದ್ರದ ನರೇಂದ್ರ ಮೋದಿಯವರು ಕೊಡುತ್ತಿದ್ದಾರೆ.
>
> – ಬಸವರಾಜ್ ಬೊಮ್ಮಾಯಿ, ಬಿಜೆಪಿ ಅಭ್ಯರ್ಥಿ.

## ಹರ್ತಿಯಲ್ಲಿ ಮತದಾನ ಜಾಗೃತಿ ಅಭಿಯಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮದಲ್ಲಿನ ಕೂಲಿಕಾರರು ಉದ್ಯೋಗಕ್ಕಾಗಿ ಬೇರೆ ಊರುಗಳಿಗೆ ವಲಸೆ ಹೋಗುವುದನ್ನು ತಪ್ಪಿಸಲು 'ವಲಸೆ ಯಾಕ್ರಿ ನಿಮ್ಮೂರಲ್ಲೇ ಉದ್ಯೋಗ' ಅಭಿಯಾನವನ್ನು ಹಮ್ಮಿಕೊಳ್ಳಲಾಗಿದ್ದು, ಕೂಲಿಕಾರ್ಮಿಕರಿಗೆ ಸ್ವಗ್ರಾಮದಲ್ಲಿಯೇ ನಿರಂತರವಾದ ಉದ್ಯೋಗವನ್ನು ಕಲ್ಪಿಸಲಾಗುವುದು. ಅದ್ದರಿಂದ ಉದ್ಯೋಗ ಖಾತ್ರಿ ಅಭಿಯಾನದಡಿ ಕೆಲಸ ಪಡೆಯಲು ನಮೂನೆ-06 ಅರ್ಜಿ ಸಲ್ಲಿಸಬೇಕು ಎಂದು ತಾ.ಪಂ ಸಹಾಯಕ ನಿರ್ದೇಶಕ (ಗ್ರಾ.ಉ) ಕುಮಾರ ಪೂಜಾರ ಹೇಳಿದರು.

ಅವರು ತಾಲೂಕಿನ ಹರ್ತಿ ಗ್ರಾಮದಲ್ಲಿ ನರೇಗಾದಡಿ ಪ್ರಗತಿಯಲ್ಲಿದ್ದ ಬದು ನಿರ್ಮಾಣ ಕಾಮಗಾರಿಯನ್ನು ಪರಿಶೀಲಿಸಿ, ಕೂಲಿಕಾರರೊಂದಿಗೆ ಮಾತನಾಡಿದರು

ಎಡಿಪಿಸಿ ಕಿರಣಕುಮಾರ ಮಾತನಾಡಿ, ನರೇಗಾ ಯೋಜನೆಯ ನಿಯಮಾನುಸಾರ ಕೂಲಿ ಕಾರ್ಮಿಕರು ಕೆಲಸ ನಿರ್ವಹಣೆ ಮಾಡಬೇಕು. ಹಾಜರಾತಿಯಲ್ಲಿ ಕಡ್ಡಾಯವಾಗಿ ಹೆಸರಿದ್ದ ಕೂಲಿಕಾರರು ಮಾತ್ರ ಕೆಲಸಕ್ಕೆ ಹಾಜರಾಗಬೇಕು ಹಾಗೂ ಕೆಲಸದ ಪ್ರಮಾಣಕ್ಕೆ ತಕ್ಕಂತೆ ಕೂಲಿ ಮೊತ್ತ ಪಾವತಿಸಲಾಗುವದು. ಗಂಡು ಮತ್ತು ಹೆಣ್ಣಿಗೆ ಸಮಾನ ಕೂಲಿ ನೀಡಲಾಗುವುದು ಎಂದು ತಿಳಿಸಿದರು.

2024ರ ಲೋಕಸಭೆ ಚುನಾವಣೆಯ ಪ್ರಯುಕ್ತ ಕಾಮಗಾರಿ ಸ್ಥಳದಲ್ಲಿ ಪಿಡಿಓ ಶಿವಲೀಲಾ ಅಂಗಡಿ ಹಾಜರಿದ್ದ ಕೂಲಿಕಾರರನ್ನು ಉದ್ದೇಶಿಸಿ ಮಾತನಾಡಿ, ಪ್ರತಿಯೊಬ್ಬ ಮತದಾರರು ಕೂಡ ಮತದಾನ ಮಾಡುವುದು ಅವರ ಆದ್ಯ ಕರ್ತವ್ಯವಾಗಿರುತ್ತದೆ. 18 ವರ್ಷ ತುಂಬಿದ ಯುವ ಮತದಾರರಿಗೆ ಗಿಊಂ ೦೮೮ ನಲ್ಲಿ ನೋಂದಾಯಿಸಿಕೊಳ್ಳಿ. ಮತದಾನ ಪ್ರಕ್ರಿಯೆಯಿಂದ ಯಾವೊಬ್ಬ ವ್ಯಕ್ತಿಯೂ ಹೊರಗುಳಿಯಬಾರದು ಎಂದು ತಿಳಿಸಿ, ಹಾಜರಿದ್ದ ಕೂಲಿಕಾರರಿಗೆ ಮತದಾನ ಪ್ರತಿಜ್ಞಾ ವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ನರೇಗಾ ತಾಂತ್ರಿಕ ಸಹಾಯಕ ಅಜಯ ಅಬ್ಬಿಗೇರಿ, ಬಿಎಫ್‌ಟಿ ಸಿದ್ದಯ್ಯ ಹೀರೆಮಠ, ಗ್ರಾ.ಪಂ ಸಿಬ್ಬಂದಿಗಳು, ನರೇಗಾ ಕಾಯಕ ಬಂಧುಗಳು, ನರೇಗಾ ನೋಂದಾಯಿತ ಕೂಲಿಕಾರರು ಹಾಜರಿದ್ದರು.

### ಕೆಫೆ ಸ್ಫೋಟ ಪ್ರಕರಣ

# ಕೋಲ್ಕತ್ತಾದ ಲಾಡ್ಜ್‌ನಲ್ಲಿ ಗುರುತು ಬದಲಿಸಿಕೊಂಡು ಅಡಗಿದ್ದ ಉಗ್ರರು

■ ವಿಜಯಸಾಕ್ಷಿ ಸುದ್ದಿ, ನವದೆಹಲಿ:

ಬೆಂಗಳೂರಿನ ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣದ ಇಬ್ಬರು ಪ್ರಮುಖ ಆರೋಪಿಗಳಾದ ಅಬ್ದುಲ್ ಮಥೀನ್ ತಾಹಾ (30) ಮತ್ತು ಮುಸ್ಸಾವಿರ್ ಹುಸೇನ್ ಶಾಜೆಬ್‌ನನ್ನು (30) ಶುಕ್ರವಾರ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ಬಂಧಿಸಿ, ಕೋಲ್ಕತ್ತಾದ ವಿಶೇಷ ನ್ಯಾಯಾಲಯಕ್ಕೆ ಹಾಜರುಪಡಿಸಿದೆ. ಇಬ್ಬರೂ ಭಯೋತ್ಪಾದಕರನ್ನು ತನಿಖೆಗಾಗಿ ರಾಜ್ಯಕ್ಕೆ ಸಾಗಿಸಲು ಮೂರು ದಿನಗಳ ಕಾಲ ತನಿಖಾ ತಂಡದ ಕಸ್ಟಡಿಗೆ (ಟ್ರಾನ್ಸಿಟ್ ರಿಮಾಂಡ್) ನೀಡಿ ಕೋರ್ಟ್ ಆದೇಶಿಸಿದೆ.

ಮಾರ್ಚ್ 20ರಂದು ಕೆಫೆ ಸ್ಫೋಟದ ಅಬ್ದುಲ್ ಮಥೀನ್ ತಾಹಾ ಮತ್ತು ಮುಸ್ಸಾವಿರ್ ಹುಸೇನ್ ಶಾಜೆಬ್ ತಲೆಮರೆಸಿಕೊಂಡಿದ್ದರು. ಮುಸ್ಸಾವಿರ್ ಹುಸೇನ್ ಕೆಫೆಯಲ್ಲಿ ಐಇಡಿ ಇರಿಸಿದ ವ್ಯಕ್ತಿ ಎಂದು ಎನ್‌ಐಎ ಗುರುತಿಸಿದೆ. ಮತ್ತೊರ್ವ ಅಬ್ದುಲ್ ಮಥೀನ್ ತಾಹಾ ಈ ಪಿತೂರಿಯ ಹಿಂದಿನ ರೂವಾರಿ ಮತ್ತು ಸ್ಫೋಟವನ್ನು ಯೋಜಿಸಿ ಕಾರ್ಯಗತಗೊಳಿಸಿದ್ದನು ಎಂದು ರಾಷ್ಟ್ರೀಯ ತನಿಖಾ ದಳ ತಿಳಿಸಿದೆ.



ಅಬ್ದುಲ್ ಮಥೀನ್ ತಾನು ಮತ್ತು ಸಹ ಆರೋಪಿಯು ಬಂಧನದಿಂದ ತಪ್ಪಿಸಿಕೊಳ್ಳುವ ಯೋಜನೆಯನ್ನು ರೂಪಿಸಿ, ವಾರಗಳ ಕಾಲ ಅದರಲ್ಲಿ ಯಶಸ್ವಿ ಕೂಡ ಆಗಿದ್ದ. ಇವರಿಬ್ಬರು ಹಾಗೂ ಮತ್ತೊಬ್ಬ ಸಹ ಆರೋಪಿ ಮಾಜ್ ಮುನೀರ್ ಅಹ್ಮದ್ ಜತೆಗೆ ಈ ಹಿಂದೆ ಭಯೋತ್ಪಾದನೆ ಪ್ರಕರಣಗಳಲ್ಲಿ ಭಾಗಿಯಾಗಿದ್ದರು. ಇಬ್ಬರು ಆರೋಪಿಗಳನ್ನು ಕೋಲ್ಕತ್ತಾದ ಎನ್‌ಐಎ ವಿಶೇಷ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ ಎಂದು ಪತ್ರಿಕಾ ಪ್ರಕಟಣೆ ನೀಡಿದೆ.

ಮಾರ್ಚ್ 3ರಂದು ಪ್ರಕರಣದ ತನಿಖೆಯನ್ನು ಕೈಗೆತ್ತಿಕೊಂಡಿದ್ದ ಎನ್‌ಐಎ, ಈ ಇಬ್ಬರು ಆರೋಪಿಗಳಾದ ಮಾಜ್ ಮುನೀರ್ ಅಹ್ಮದ್ ಮತ್ತು ಮುಝಾಮಿಲ್ ಶರೀಫ್‌ನನ್ನು ಸ್ಫೋಟದಲ್ಲಿ ಪ್ರಮುಖ ಪಾತ್ರ ವಹಿಸಿದ ಭಯೋತ್ಪಾದಕರು ಎಂದು ಗುರುತಿಸಿತ್ತು. ಮುಝಾಮಿಲ್ ಶರೀಫ್ ಐಇಡಿ ಸ್ಫೋಟವನ್ನು ನಡೆಸುವ ಇತರ ಆರೋಪಿಗಳಿಗೆ ಸ್ಫೋಟಕ ಸಾಮಗ್ರಿ ಪೂರೈಸುವಲ್ಲಿ ತೊಡಗಿಸಿಕೊಂಡಿದ್ದ ಎಂದು ತನಿಖಾ ಸಂಸ್ಥೆ ತಿಳಿಸಿದೆ.

ಕೊನೆಗೂ, ಶುಕ್ರವಾರ ಭಯೋತ್ಪಾದನಾ ನಿಗ್ರಹ ದಳವು ಇಬ್ಬರು ಭಯೋತ್ಪಾದಕರನ್ನು ಕೋಲ್ಕತ್ತಾದಲ್ಲಿ ಪತ್ತೆಹಚ್ಚಿದೆ. ಕೇಂದ್ರದ ವಿವಿಧ ಸಂಸ್ಥೆಗಳು ಮತ್ತು ಕರ್ನಾಟಕ, ಪಶ್ಚಿಮ ಬಂಗಾಳ, ತಮಿಳುನಾಡು, ಉತ್ತರ ಪ್ರದೇಶ, ದೆಹಲಿ, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯ ಪೊಲೀಸ್ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ಎನ್ ಐಎ ಮಾಹಿತಿ ನೀಡಿದೆ.

> ಈ ಭಯೋತ್ಪಾದಕರು ತಮ್ಮ ಗುರುತು ಬದಲಾಯಿಸಿಕೊಂಡು ಕೋಲ್ಕತ್ತಾದ ಬಳಿಯ ಲಾಡ್ಜ್‌ನಲ್ಲಿ ತಂಗಿದ್ದರು. ಆರೋಪಿಗಳ ಬಂಧನಕ್ಕೆ ಪಶ್ಚಿಮ ಬಂಗಾಳ ಪೊಲೀಸರನ್ನು ಸಂಪರ್ಕಿಸಿದ ತಕ್ಷಣವೇ, ಅವರು ಸಹ ಸ್ಪಂದಿಸಿದರು. ಇದು ಶೋಧ ಕಾರ್ಯಾಚರಣೆಯ ಯಶಸ್ವಿ ಮತ್ತು ಭಯೋತ್ಪಾದಕರ ಬಂಧನಕ್ಕೆ ಕಾರಣವಾಯಿತು. ಈ ಪ್ರಕರಣದಲ್ಲಿ ಹೆಚ್ಚಿನ ತನಿಖೆ ಮುಂದುವರಿದಿದೆ ಎಂದು ಪ್ರಕಟಣೆಯಲ್ಲಿ ತನಿಖಾ ಸಂಸ್ಥೆ ವಿವರಿಸಿದೆ.

**ನಾಲ್ವರ ಹೆಸರು ಉಲ್ಲೇಖಿಸಿದ ಎನ್‌ಐಎ:** ಕೆಫೆ ಬಾಂಬ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಬಾಂಬರ್, ಸಂಚಿನ ರೂವಾರಿ ಸೇರಿದಂತೆ ಒಟ್ಟಾರೆ ನಾಲ್ವರ ಹೆಸರನ್ನು ಎನ್‌ಐಎ ತನ್ನ ಇಂದಿನ ಪತ್ರಿಕಾ ಪ್ರಕಟಣೆಯಲ್ಲಿ ಉಲ್ಲೇಖಿಸಿದೆ. ಕೆಫೆಯಲ್ಲಿ ಐಇಡಿ ಇರಿಸಿದವನು ಮುಸ್ಸಾವಿರ್ ಹುಸೇನ್ ಆಗಿದ್ದರೆ, ಈ ಪಿತೂರಿಯ ಹಿಂದಿನ ರೂವಾರಿ ಅಬ್ದುಲ್ ಮಥೀನ್ ತಾಹಾ ಎಂದು ಸ್ಪಷ್ಟವಾಗಿ ಉಲ್ಲೇಖಿಸಿದೆ. ಮುಝಾಮಿಲ್ ಶರೀಫ್ ಎಂಬುವ ಸ್ಫೋಟಕ ಸಾಮಗ್ರಿ ಪೂರೈಸುವಲ್ಲಿ ತೊಡಗಿಸಿಕೊಂಡಿದ್ದ ಎಂದು ಈ ಹಿಂದೆಯೇ ಗುರುತಿಸಲಾಗಿತ್ತು.

ಅಲ್ಲದೇ, ಮುಸ್ಸಾವಿರ್, ಮಥೀನ್ ಇಬ್ಬರೂ ಶಿವಮೊಗ್ಗದ ತೀರ್ಥಹಳ್ಳಿಯವರು ಹಾಗೂ ಮುಝಾಮಿಲ್ ಚಿಕ್ಕಮಗಳೂರಿನ ಕಳಸಾದ ಮೂಲದವನು ಎಂದು ತನಿಖಾ ದಳ ಬಹಿರಂಗ ಪಡಿಸಿತ್ತು. ಇಂದು ಈ ಮೂವರ ಜೊತೆ-ಗೆ ಮಾಜ್ ಮುನೀರ್ ಅಹ್ಮದ್ ಎಂಬ ಮತ್ತೊಬ್ಬನ ಹೆಸರನ್ನೂ ಬಹಿರಂಗಪಡಿಸಿದೆ. ಇವನು ಈ ಹಿಂದೆ ಭಯೋತ್ಪಾದನಾ ಪ್ರಕರಣಗಳಲ್ಲೂ ಭಾಗಿಯಾಗಿದ್ದ ಎಂದು ಮಾಹಿತಿ ನೀಡಿದೆ.

## ಬಳ್ಳಾರಿ: ಕಾಂಗ್ರೆಸ್‌ನ ಇ.ತುಕಾರಾಂ, ಬಿಜೆಪಿಯ ಶ್ರೀರಾಮುಲು ಆಸ್ತಿ ವಿವರ ಹೀಗಿದೆ



■ವಿಜಯಸಾಕ್ಷಿ ಸುದ್ದಿ, ಬಳ್ಳಾರಿ

ಇಂದು ಬಿಜೆಪಿಯಿಂದ ಶ್ರೀರಾಮುಲು ಹಾಗೂ ಕಾಂಗ್ರೆಸ್‌ನಿಂದ ಇ.ತುಕಾರಾಂ ಬಳ್ಳಾರಿ ಲೋಕಸಭಾ ಚುನಾವಣೆಗೆ ನಾಮಪತ್ರ ಸಲ್ಲಿಸಿದ್ದು, ಆಸ್ತಿ ವಿವರಗಳ ಅಫಿಡವಿಟ್ ನೀಡಿದ್ದಾರೆ.

ಇ.ತುಕಾರಾಂ ಆಸ್ತಿ: ವಿವಿಧ ಬ್ಯಾಂಕ್‌ಗಳಲ್ಲಿ ಠೇವಣಿ ಸೇರಿ 1,54,11,137 ರೂ ಇದೆ. ಪತ್ನಿ ಅನ್ನಪೂರ್ಣ ಅವರ ಹೆಸರಲ್ಲಿ 36,85,837 ರೂ. ಇದೆ. ಮಗಳು ವಂದನಾ ಹೆಸರಲ್ಲಿ 7,21,931 ರೂ., ಮತ್ತೋರ್ವ ಮಗಳು ಚೈತನ್ಯಾ ಹೆಸರಲ್ಲಿ 3,54,790 ರೂ., ಪುತ್ರ ರಘುನಂದನ್ ಹೆಸರಲ್ಲಿ 22,05,174 ರೂ. ಹಾಗೂ 8.21 ಎಕರೆ ಕೃಷಿ ಭೂಮಿ ಇದೆ. ರಘುನಂದನ್ ಹೊರತುಪಡಿಸಿ ಕುಟುಂಬದ ಯಾರ ಹೆಸರಲ್ಲಿಯೂ ಕೃಷಿ ಭೂಮಿ ಇಲ್ಲ.

ತುಕಾರಾಂ ಅವರ ಸ್ಥಿರಾಸ್ತಿ ಮೌಲ್ಯ 47,66,960 ರೂ., ಪತ್ನಿ ಹೆಸರಲ್ಲಿರುವ ಸ್ಥಿರಾಸ್ತಿ ಮೌಲ್ಯ 63,21,380 ರೂ ಆಗಿದೆ. ಮಗ ರಘುನಂದನ್ ಹೆಸರಲ್ಲಿ ಸ್ಥಿರಾಸ್ತಿ 18,00,000 ರೂ. ಇದೆ. ಇ.ತುಕಾರಾಂ ಸ್ನೇಹಿತರು ಹಾಗು ಬಂಧುಗಳಿಂದ ಪಡೆದ ಸಾಲ 30,00,000 ರೂ., ಪತ್ನಿ ತುಕಾರಾಂ ಹಾಗು ತಾಯಿಯಿಂದ ಪಡೆದ ಸಾಲ 93,25,000 ರೂ. ಇದೆ.

ಬಿ.ಶ್ರೀರಾಮುಲು ಆಸ್ತಿ: ಚರಾಸ್ತಿ ಮೌಲ್ಯ 34,039,839 ರೂ., ಸ್ತಿರಾಸ್ತಿ 61,53,86,290 ರೂ.ಸೇರಿದಂತೆ ಒಟ್ಟು ಆಸ್ತಿ ಮೌಲ್ಯ 64,94,26,129 ರೂ ಇದೆ. ಸಾಲ 7,62,88,428 ಇದೆ.

ಶ್ರೀರಾಮುಲು ಒಟ್ಟು ಆಸ್ತಿ ಮೌಲ್ಯ 45,88,02,320 ರೂ. ಇದರಲ್ಲಿ 6,22,57,520 ರೂ ಮೌಲ್ಯದ ಚರಾಸ್ತಿ ಇದೆ. 39,65,44,800 ರೂ. ಮೌಲ್ಯದ ಸ್ಥಿರಾಸ್ತಿ ಇದೆ. ಸಾಲ 6,69,63,428 ರೂ. ಇದೆ. ಆದಾಯ ತೆರಿಗೆ ಬಾಕಿ 28,01,403 ರೂ. ವಿವಾದಿತ ಸರ್ಕಾರಿ ಬಾಕಿ 1,40,93,370 ರೂ ಇದೆ. ಪತ್ನಿ ಭಾಗ್ಯಲಕ್ಷ್ಮಿ ಒಟ್ಟು ಆಸ್ತಿ ಮೌಲ್ಯ 22,57,14,086 ರೂ ಇದೆ. ಚರಾಸ್ತಿ 2,28,14,089 ರೂ ಮೌಲ್ಯ. ಸ್ಥಿರಾಸ್ತಿ 20,29,00,000 ರೂ. ಸಾಲ 93,25,000 ರೂ ಇದೆ.

## ಪೂರ್ವಭಾವಿ ಸಭೆ ಇಂದು




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹರಿಹರ ಪಂಚಮಸಾಲಿ ಪೀಠದ ಜಗದ್ಗುರು ಶ್ರೀ ವಚನಾನಂದ ಮಹಾಸ್ವಾಮಿಗಳ 6ನೇ ವರ್ಷದ ಪೀಠಾರೋಹಣ ಸಮಾರಂಭದ ಅಂಗವಾಗಿ ಏ.13ರ ಬೆಳಿಗ್ಗೆ 10ಕ್ಕೆ ಪಟ್ಟಣದ ಎಸ್‌ಬಿಐ ಬ್ಯಾಂಕಿನ ಮೇಲಿನ ಎಪಿಎಂಸಿ ವರ್ತಕರ ಸಭಾಭವನದಲ್ಲಿ ಭಕ್ತರ ಮತ್ತು ಸಮಾಜ ಬಾಂಧವರ ಪೂರ್ವಭಾವಿ ಸಭೆ ಕರೆಯಲಾಗಿದೆ.

ಸಭೆಯ ಸಾನಿಧ್ಯವನ್ನು ಶ್ರೀ ವಚನಾನಂದ ಮಹಾಸ್ವಾಮಿಗಳು ವಹಿಸುವರು. ಪಟ್ಟಣ ಸೇರಿ ತಾಲೂಕಿನ ಎಲ್ಲ ಗ್ರಾಮಗಳ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಲಹೆ-ಸೂಚನೆಗಳನ್ನು ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕು ಎಂದು ಲಕ್ಷ್ಮೇಶ್ವರ ತಾಲೂಕು ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ ತಿಳಿಸಿದ್ದಾರೆ.

## ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.96 ಅಂಕ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಪುಟಗಾಂವ್‌ಬಡ್ನಿ ಗ್ರಾಮದ ಮಲ್ಲಿಕಜಾನ್ ಹಸನ್‌ಸಾಬ್ ಭಾವಿಕಟ್ಟಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.96 ಅಂಕ ಗಳಿಸಿದ್ದಾನೆ. ಈತ ವಿಜಯನಗರ ಜಿಲ್ಲೆ ಕೊಟ್ಟೂರಿನ ಹಿಂದೂ ಪ್ರಿಯುನಿವರ್ಸಿಟಿ ಕಾಲೇಜಿನಲ್ಲಿ ಕಲಾ ವಿಭಾಗದಲ್ಲಿ ಅಭ್ಯಾಸ ಮಾಡುತ್ತಿದ್ದಾನೆ.

### ಕವನ ಬೆಳೆಸು ಹೊಳೆಸು

ಶರಣು ಶಂಕರ
ತೆರಸಿ ಕಣ್ಣನು
ಸಿರಿಯ ಬದುಕನು ಮೆರಗಿಸು /
ಅರುವಿನಣತೆಯ
ನರನ ಬದುಕಲಿ
ಮೆರಸಿ ಹೊಳೆಸುತ ಬೆಳಗಿಸು /
ಅರಳಿ ಚಿಗುರಿಸಿ
ಮುರಳಿ ಲೋಲನೆ
ಹರುಷ ದಿಂದಲಿ ಪೋಷಿಸು /
ಒರಗಿ ನಿನ್ನಲಿ
ಚರಣ ಕಮಲಕೆ
ವರವ ನೀಡುತ ರಕ್ಷಿಸು /
ತೆರಳ ಮನವನು
ಸಿರಿಯ ಗೊಳಿಸುತ
ಬೆರಳ ಹಿಡಿಸುತ ನೆಡಸಯ /
ಅರಳಿದೂವನು
ಸರವ ಮಾಡುತ
ಕೊರಳಿಗಾಕುವೆ ನೋಡಯ /
ಹರನೆ ನಮ್ಮನು
ಹರಸಿ ಬೆಳಸಯ
ಮರೆತು ಬಾಳೆವು ನಿನ್ನನು/
ದುರುಳ ಮನವನು
ಸರಿಯ ಮಾಡುತ
ಸಿರಿಯ ಬದುಕನು ಬೆಳಗಿಸು /

– ಗೀತಾ ಎಂ.ಸೋಂಪುರ, ಕೊಪ್ಪಳ.

### ಗುದನಾಳದಲ್ಲಿ ಬಚ್ಚಿಟ್ಟು 58 ಲಕ್ಷ ಮೌಲ್ಯದ ಚಿನ್ನ ಸಾಗಿಸುತ್ತಿದ್ದ ಪ್ರಯಾಣಿಕ ಸೆರೆ



■ವಿಜಯಸಾಕ್ಷಿ ಸುದ್ದಿ, ಮಂಗಳೂರು

ಪ್ರಯಾಣಿಕ ನೊಬ್ಬ ಗುದನಾಳದಲ್ಲಿ ಚಿನ್ನ ಬಚ್ಚಿಟ್ಟು ಕಳ್ಳಸಾಗಣೆ ಮಾಡುತ್ತಿದ್ದುದನ್ನು ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಕಸ್ಟಮ್ಸ್ ಅಧಿಕಾರಿಗಳು ಬಯಲಿಗೆಳೆದಿದ್ದಾರೆ. ಏಪ್ರಿಲ್ 11ರಂದು ದುಬೈನಿಂದ ಬಂದ ವಿಮಾನದಲ್ಲಿದ್ದ ಪ್ರಯಾಣಿಕನಿಂದ 58 ಲಕ್ಷದ 78 ಸಾವಿರದ 880 ರೂ. ಮೌಲ್ಯದ 812 ಗ್ರಾಂ ತೂಕದ 24 ಕ್ಯಾರೆಟ್ ಚಿನ್ನ ವಶಪಡಿಸಿಕೊಂಡಿದ್ದಾರೆ. ಗುದನಾಳದಲ್ಲಿ ಅಂಡಾಕಾರದ 3 ವಸ್ತುಗಳಲ್ಲಿ ಚಿನ್ನವನ್ನು ಪೇಸ್ಟ್ ರೂಪದಲ್ಲಿ ಮರೆಮಾಡಿ ಸ್ಮಗ್ಲಿಂಗ್ ಮಾಡಲಾಗುತ್ತಿತ್ತು. ಪ್ರಯಾಣಿಕನನ್ನು ಬಂಧಿಸಿದ ಅಧಿಕಾರಿಗಳು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದಾರೆ.

### ಏ.13ರಿಂದ 15ರವರೆಗೆ ಸುಕ್ಷೇತ್ರ ಶಿಂಗಟಾಲೂರ ಶ್ರೀ ವೀರಭದ್ರೇಶ್ವರ ದೇವರ ಜಾತ್ರಾ ಮಹೋತ್ಸವ

# ಶಿಷ್ಟ ಪರಿಪಾಲಕ ಶ್ರೀ ವೀರಭದ್ರ

ಶಿವನ ಉರಿನೇತ್ರದಿಂದ ಉದ್ಭವಿಸಿ, ನವಬ್ರಹ್ಮರಲ್ಲಿಯೇ ಮೇಲಾದ ದಕ್ಷಬ್ರಹ್ಮನ ಶಿರವ ಹರಿದು, ವೀರ ಹನುಮಂತನಿಗೆ ಇಷ್ಟಲಿಂಗ ಧಾರಣೆ ಮಾಡಿ, ಜಗದ್ಗುರು ರೇಣುಕಾಚಾರ್ಯರ ಪೀಠದ ಅಧಿಪತಿಯಾಗಿ, ಹಿರಣ್ಯರಾಕ್ಷಸನನ್ನು ಸಂಹಾರ ಮಾಡಿ, ಆತನ ಶಿರವನ್ನು ತನ್ನ ಕೊರಳಲ್ಲಿ ರುಂಡಮಾಲೆಯನ್ನಾಗಿರಿಸಿಕೊಂಡು, ಗುಗ್ಗಳ ಪ್ರಿಯನಾಗಿ, ಶಿವನ ನೆಚ್ಚಿನ ಮಗನಾಗಿ, ದುಷ್ಟರನ್ನು ದಂಡಿಸಿ, ಭಕ್ತರನ್ನು ಉದ್ಧರಿಸಿ, ಧರ್ಮಜಾಗೃತಗೊಳಿಸಿ, ಭೂಲೋಕದಲ್ಲಿ ಶಿವಭಕ್ತಿ ಆಂದೋಲನ ಮಾಡಿ ಜಗದೊಡೆಯನಾಗಿ ಕಾಮಿತಾರ್ಥವನ್ನು ಬೇಡಿದವರಿಗೆ ನೀಡುತ್ತಾ, ಮೃಡನ ಭಕ್ತರನ್ನು ನಿರುತ ಸಲುಹುತ್ತಾ ದುಷ್ಟರನ್ನು ಶಿಕ್ಷಿಸುತ್ತಾ ಶಿಷ್ಟರನ್ನು ರಕ್ಷಿಸುತ್ತಾ ಕಾಮಧೇನು ಕಲ್ಪವೃಕ್ಷವಾಗಿ ಕಪ್ಪತ್ತಗುಡ್ಡದ ತುದಿಯಂಚಿನಲ್ಲಿ ತುಂಗಭದ್ರಾ ನದಿಯ ದಂಡೆಯ ಮೇಲೆ ವಿರಾಜಮಾನನಾಗಿ ಶಿಂಗಟಾಲೂರ ಕ್ಷೇತ್ರದಲ್ಲಿ ನೆಲೆಸಿ ಭಕ್ತರ ಸಂಕಟಗಳನ್ನು ದೂರ ಮಾಡುತ್ತಾ ವಿಜೃಂಭಿಸುತ್ತಿರುವನು ಶ್ರೀ ವೀರಭದ್ರ. ಉದ್ಭವ ಮೂರ್ತಿ ಸದ್ಯ ಶಿಂಗಟಾಲೂರಿನಲ್ಲಿ ನಿತ್ಯವೂ ಪೂಜೆಗೊಳ್ಳುತ್ತಿರುವ ವೀರಭದ್ರ ದೇವರ ಮೂರ್ತಿಗೆ ಹಿಂದೆ ಪ್ರತಿ ದಿವಸ ಆಕಳು ಹುತ್ತದ ಮೇಲೆ ಹಾಲು ಕರೆಯುತ್ತಿರುವುದನ್ನು ಪಕ್ಕದ ಗವಿಸಿದ್ದೇಶ್ವರ ದೇವಸ್ಥಾನದಲ್ಲಿ ತಪೋನಿಷ್ಠರಾಗಿದ್ದ ಓರ್ವ ಋಷಿಯು ಗ್ರಾಮಸ್ಥರನ್ನು ಕರೆಯಿಸಿ ಈ ವಿಷಯವನ್ನು ತಿಳಿಸುತ್ತಾ, ಹಸು ಪ್ರತಿನಿತ್ಯವೂ ವೀರಭದ್ರ ದೇವರಿಗೆ ಕ್ಷೀರಾಭಿಷೇಕವನ್ನು ನೆರವೇರಿಸುತ್ತಿದೆ. ಆದ್ದರಿಂದ ಈ ಉದ್ಭವ ಮೂರ್ತಿಯನ್ನು ಹೊರತೆಗೆದು ಗವಿಯ ಬಲಭಾಗದಲ್ಲಿ ಪ್ರತಿಷ್ಠಾಪಿಸುವಂತೆ ಆಜ್ಞೆ ಮಾಡಿದರು. ಭಕ್ತರೆಲ್ಲರೂ ಹುತ್ತವನ್ನು ಅಗೆದು, ಅಲ್ಲಿ ಸುಂದರ ಏಕಶಿಲಾ ವೀರಭದ್ರ ದೇವರ ಮೂರ್ತಿಯನ್ನು ಹೊರತೆಗೆದು ಅಲ್ಲಿಯೇ ಪ್ರತಿಷ್ಠಾಪಿಸಿದ್ದಾರೆ. ಅದೇ ಸ್ಥಳವು ಈಗ ಶಿಂಗಟಾಲೂರ ಕ್ಷೇತ್ರವಾಗಿ ನಾಡಿನ ಉದ್ದಗಲಕ್ಕೂ ಅಪಾರ ಭಕ್ತ ಸಮೂಹವನ್ನು ಹೊಂದಿ ಪ್ರತಿನಿತ್ಯವೂ ರುದ್ರಾಭಿಷೇಕ, ಶ್ರಾವಣ ಮಾಸಗಳಲ್ಲಿ, ಕಾರ್ತಿಕ ಮಾಸಗಳಲ್ಲಿ ವಿಶೇಷ ಉತ್ಸವಗಳು, ಅಗ್ನಿ ಮಹೋತ್ಸವಗಳು, ಧರ್ಮ ಸಮ್ಮೇಳನಗಳು ನಡೆಯುತ್ತಾ ಬಂದಿವೆ.





ಈ ಕುರಿತು ಪ್ರತಿಕ್ರಿಯಿಸಿದ ದೇವಸ್ಥಾನ ಟ್ರಸ್ಟ್ ಕಮಿಟಿ ಅಧ್ಯಕ್ಷ ಕರಬಸಪ್ಪ ಹಂಚಿನಾಳ, ದೇವಸ್ಥಾನಕ್ಕೆ ಬರುವ ಭಕ್ತರಿಗೆ ಎಲ್ಲ ಅಗತ್ಯ ಮೂಲಸೌಲಭ್ಯವನ್ನು ಕಲ್ಪಿಸುವುದರ ಜೊತೆಗೆ ಇತ್ತೀಚೆಗೆ ನಿತ್ಯವೂ ಸಿಹಿ ಊಟದ ದಾಸೋಹವನ್ನು ಪ್ರಾರಂಭಿಸಲಾಗಿದೆ. ಏ.11ರಂದು ನೂತನವಾಗಿ ಗಣೇಶ ದೇವಸ್ಥಾನವನ್ನು ಸಹ ಪ್ರತಿಷ್ಠಾಪನೆ ಮಾಡಲಾಗಿದೆ. ಬೃಹತ್ ಕಲ್ಯಾಣ ಮಂಟಪ ನಿರ್ಮಾಣದ ಬಗ್ಗೆ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ರಾಕ್ ಉದ್ಯಾನವನವನ್ನು ನಿರ್ಮಿಸಿದ್ದರಿಂದ ಭಕ್ತರಿಗೆ ಅನುಕೂಲವಾಗಿದೆ. ಜಾತ್ರೆ ಅಂಗವಾಗಿ ನದಿಗೆ ನೀರನ್ನು ಹರಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಜಾತ್ರೆಯ ಎಲ್ಲ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಿ ವೀರಭದ್ರ ದೇವರ ಕೃಪೆಗೆ ಪಾತ್ರರಾಗಬೇಕೆಂದು ಹೇಳಿದರು.

ಭೂಲೋಕದಲ್ಲಿ ಶಿವಭಕ್ತಿ ಆಂದೋಲನ ಮಾಡಿ ಜಗದೊಡೆಯನಾಗಿ ಭೂಮಿಯಲ್ಲಿ ನೆಲೆಸಿರುವನು. ಈ ಮಹಾಮಹಿಮನು ದಕ್ಷಯಜ್ಞದಲ್ಲಿ ಕೆಂಡದ ಓಕುಳಿ ಆಡಿದ ದ್ಯೋತಕವಾಗಿ ಪ್ರತಿವರ್ಷ ಮುಂಡರಗಿ ತಾಲೂಕ ಶಿಂಗಟಾಲೂರು ಸುಕ್ಷೇತ್ರದಲ್ಲಿ ಕಂದಗಲ್ಲನ ಅಭಿನವ ಸಿದ್ದವೀರ ಸ್ವಾಮೀಜಿ, ಕಲಕೇರಿ–ವಿರುಪಾಪೂರದ ಮುದುಕೇಶ್ವರ ಶಿವಾಚಾರ್ಯ ಸ್ವಾಮೀಜಿ ಮತ್ತು ಬನ್ನಿಕೊಪ್ಪ-ಮೈಸೂರು ಜಪದಕಟ್ಟೆಯ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿಗಳ ಸಾನಿಧ್ಯದಲ್ಲಿ ಚೈತ್ರ ಶುದ್ಧ ಪಂಚಮಿಯ ಏ.13ರ ಶನಿವಾರ ದಿವಸ ಸಾಯಂಕಾಲ 5 ಗಂಟೆಗೆ ಮಹಾರಥೋತ್ಸವ, ರಾತ್ರಿ 7 ಗಂಟೆಗೆ ಧರ್ಮಸಭೆ ನಡೆಯಲಿದೆ.

ಏ.14ರ ಸೋಮವಾರ ಬೆಳಿಗ್ಗೆ 5 ಗಂಟೆಗೆ ವೀರಭದ್ರ ದೇವರಿಗೆ ಮಹಾರುದ್ರಾಭಿಷೇಕ, ನಂತರ ವೀರಪುರವಂತರೊಂದಿಗೆ, ಸಮ್ಮಾಳಗಳ ಝೇಂಕಾರದೊಂದಿಗೆ, ನಂದಿಧ್ವಜಗಳ ಭವ್ಯ ಕುಣಿತದೊಂದಿಗೆ, ಬಾಜಾ ಭಜಂತ್ರಿ, ಛತ್ರಿ ಚಾಮರಗಳೊಂದಿಗೆ ವೀರಭದ್ರ ದೇವರ ಉತ್ಸವ ಮೂರ್ತಿಯನ್ನು ಪಲ್ಲಕ್ಕಿಯಲ್ಲಿರಿಸಿ ವೀರಭದ್ರ ದೇವರ ಒಡಪುಗಳನ್ನು ಹೇಳುತ್ತಾ, ಪುರವಂತರು ಪೌಳಿಯ ಕೆಳಗಡೆ ನಿರ್ಮಿಸಿರುವ ಸುಮಾರು 30–40 ಅಡಿ ಆಳದ ಅಗ್ನಿಕುಂಡದಲ್ಲಿ ಹಾಯುವ ಮೂಲಕ ವೀರಭದ್ರನ ಕೃಪೆಗೆ ಪಾತ್ರರಾಗುತ್ತಿದ್ದಾರೆ. ಪುರವಂತರಷ್ಟೇ ಅಲ್ಲದೇ ಬಂದಂತಹ ಸಹಸ್ರಾರು ಭಕ್ತರು ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಗಲ್ಲಗಳಿಗೆ, ತುಟಿಗಳಿಗೆ, ನಾಲಿಗೆ, ಗಂಟಲಿನಲ್ಲಿ ಹಾಗೂ ಹೊಟ್ಟೆಯಲ್ಲಿ ಶಸ್ತ್ರವನ್ನು ಧರಿಸಿ ತಮ್ಮ ಭಕ್ತಿಯ ಪರಾಕಾಷ್ಠೆಯನ್ನು ಮೆರೆಯುವುದಕ್ಕೆ ಸನ್ನದ್ಧರಾಗುತ್ತಿದ್ದಾರೆ.

### ಜಲಿಯನ್ ವಾಲಾಭಾಗ್ ಹತ್ಯಾಕಾಂಡದ ಕರಾಳ ನೆನಪಿನ ದಿನ

# ಸ್ವಾತಂತ್ರ್ಯ ಸಮರದ ಅಮರ ವೀರರು

ಬ್ರಿಟಿಷರ ಅಟ್ಟಹಾಸ, ಭೋರ್ಗರೆವ ಗುಂಡಿನ ಮಳೆ, ಸಾವಿರಾರು ಅಮಾಯಕರ ಆಕ್ರಂದನ, ಚೆಲ್ಲಾಪಿಲ್ಲಿಯಾಗಿ ಹರಡಿರುವ ರಕ್ತ ಸಿಕ್ತ ದೇಹಗಳು, ದಿಕ್ಕು ತೋಚದೆ ಬಾವಿಯಲ್ಲಿ ಜಿಗಿದು ಪ್ರಾಣ ಬಿಡುತ್ತಿರುವ ಜನ...ಇವನ್ನೆಲ್ಲಾ ನೆನಪಿಸಿಕೊಂಡರೆ ಮನ ವಿಲ ವಿಲ ಒದ್ದಾಡುತ್ತದೆ. ಮೈ ಜುಮ್ ಎನ್ನುವುದರಲ್ಲಿ ಸಂಶಯವಿಲ್ಲ.

ಆಲಿಯನ್ ವಾಲಾಭಾಗ್ ಹತ್ಯಾಕಾಂಡ ಭಾರತದ ಇತಿಹಾಸದಲ್ಲೇ ಕಂಡರಿಯದ ಕರಾಳವಾದ ದಿನ. ಭರತ ಖಂಡದಲ್ಲಿ ಸ್ವಾತಂತ್ರಪೂರ್ವ ಬ್ರಿಟಿಷರ ದಬ್ಬಾಳಿಕೆ ಹೇಗಿತ್ತು ಎಂಬುದಕ್ಕೆ ಇದೊಂದು ಪ್ರತ್ಯಕ್ಷ ನಿದರ್ಶನ. ಸಾವಿರಾರು ಅಮಾಯಕರನ್ನು ನಾಲ್ಕು ಗೋಡೆಗಳ ಮಧ್ಯೆ ಭೀಕರವಾಗಿ ಸಂಹಾರಗೈದು, ಅಟ್ಟಹಾಸದಿ ಹೇಡಿತನ ಮೆರೆದ ಬ್ರಿಟಿಷರ ಆ ದಿನವನ್ನು ಪ್ರತಿ ಭಾರತೀಯ ಹೇಗೆ ಮರೆಯಲಿಕ್ಕೆ ಸಾಧ್ಯ?

1919, ಎಪ್ರಿಲ್ 13. ಸಾಯಂಕಾಲ 4.30ರ ಸಮಯ. ಪಂಜಾಬ್ ಪ್ರಾಂತದ ಅಮೃತ್‌ಸರ್‌ನ ಪಕ್ಕದ ಜಲಿಯನ್‌ವಾಲಾ ಬಾಗ್ ಮೈದಾನದಲ್ಲಿ ಬ್ರಿಟಿಷ್ ಸರಕಾರದ ಅಮಾನವೀಯ ಕಾನೂನಿನ ವಿರುದ್ಧ ಪ್ರತಿಭಟಿಸಲು ಸುಮಾರು 20 ಸಾವಿರಕ್ಕಿಂತಲೂ ಹೆಚ್ಚು ಜನ ಸೇರಿದ್ದರು. ಸುತ್ತಲೂ ಎತ್ತರದ ಗೋಡೆಗಳಿಂದ ಆವೃತವಾಗಿದ್ದ ಕಿರಿದಾದ ಪ್ರವೇಶದ್ವಾರವನ್ನು ಹೊಂದಿದ್ದ ಈ ಮೈದಾನಕ್ಕೆ ಬೈಸಾಕಿ ಹಬ್ಬದ ಸಂತೋಷದಲ್ಲಿದ್ದ ಅಮೃತಸರ್‌ನ ಸುತ್ತಲಿನ ಊರುಗಳ ಜನ ಸೇರಿದ್ದರು.

ಪಂಜಾಬ್‌ನ ಲೆಫ್ಟಿನೆಂಟ್ ಗವರ್ನರ್ ಮೈಕೆಲ್ ಒಡ್ವೆ ಯರ್‌ನ ಸುಪರ್ದಿಯಲ್ಲಿ, ಸೇನೆಯ ಕರ್ನಲ್ ರೆಜಿನಾಲ್ಡ್ ಡಯರ್ ಸಭೆಗೆ ಬಂದಿದ್ದ ಅಮಾಯಕ ಜನರನ್ನು ಬಲಿ ತೆಗೆದುಕೊಳ್ಳಲು ಮೊದಲೇ ಸಂಚು ರೂಪಿಸಿದಂತಿತ್ತು. ಗುಂಪು ಸೇರುವುದನ್ನು ತಡೆಯದ ಡಯರ್‌ನ ಸೈನ್ಯ ಜನ ಮೈದಾನದಲ್ಲಿ ಸೇರುವವರೆಗೂ ಸುಮ್ಮನಿದ್ದು, ಮೊದಲೇ ಇಕ್ಕಟ್ಟಾದ ಏಕೈಕ ದಾರಿಗೆ ಅಡ್ಡವಾಗಿ ಗನ್ನುಗಳೇ ತುಂಬಿದ್ದ ತನ್ನ ಜೀಪನ್ನು ಅಡ್ಡವಿರಿಸಿದ್ದ. ಡಯರ್ ನೇತೃತ್ವದ ಸುಮಾರು 50 ಜನ ಶಸ್ತ್ರಸಹಿತ ಸೈನಿಕರು ಜನರಿಗೆ ಕನಿಷ್ಠಪಕ್ಷ ಚದುರಲು ಎಚ್ಚರಿಕೆಯನ್ನೂ ನೀಡದೆ ನೇರವಾಗಿ ಗುಂಡಿನ ಸುರಿಮಳೆಗರೆದರು.



ನೋಡ ನೋಡುತ್ತಿದ್ದಂತೆಯೇ ಗುಂಡಿನ ದಾಳಿಗೆ ನೂರಾರು ಜನ ನೆಲಕ್ಕುರುಳಿದರು. ಗಾಯಗೊಂಡವರ ಆಕ್ರಂದನ ಮುಗಿಲು ಮುಟ್ಟಿತು. ಗುಂಡಿನ ದಾಳಿಯಿಂದ ಪಾರಾಗಲು ಓಡುವಾಗ ಕಾಲ್ತುಳಿತಕ್ಕೆ ಸಿಕ್ಕಿ ಮರಣ ಹೊಂದಿದವರು ನೂರಾರು ಜನ. ಕೆಲವರು ಎತ್ತರದ ಗೋಡೆಯನ್ನು ಹಾರಲು ಹೋಗಿ ಡಯರ್‌ನ ಸೈನಿಕರ ಗುಂಡಿಗೆ ಬಲಿಯಾದರು. ಮೈದಾನದ ಪಕ್ಕದಲ್ಲಿದ್ದ ಬಾವಿಯೊಳಗೆ ಹಾರಿ ಪ್ರಾಣ ಉಳಿಸಿಕೊಳ್ಳಬಹುದೆಂದು ಹಾರಿದವರೂ ಬದುಕುಳಿಯಲಿಲ್ಲ. 1650 ಸುತ್ತುಗಳ ಗುಂಡು ಹಾರಿಸಿದ ಬ್ರಿಟಿಷ್ ಸೈನಿಕರು ಅಕ್ಷರಶಃ ರಾಕ್ಷಸರಾಗಿ ವರ್ತಿಸಿದ್ದರು.

ಕ್ರೌರ್ಯ ಮೆರೆದ ಡಯರ್ ಆಗಲಿ, ಪಂಜಾಬ್‌ನ ಗವರ್ನರ್ ಆಗಲಿ ಈ ಘಟನೆಯ ಬಗ್ಗೆ ಪಶ್ಚಾತ್ತಾಪದ ಸಣ್ಣ ಸೆಲೆಯನ್ನೂ ತೋರಲಿಲ್ಲ! ಹತ್ಯಾಕಾಂಡದ ಸುದ್ದಿಯು ಪಂಜಾಬ್‌ನಿಂದ ಹೊರಹೋಗದಂತೆ ಎಲ್ಲಾ ಪ್ರಯತ್ನಪಟ್ಟ ಸರಕಾರ ಒತ್ತಾಯಕ್ಕೆ ಮಣಿದು ಘಟನೆ ನಡೆದ ಮೂರು ತಿಂಗಳ ಬಳಿಕ ಒಂದು ತನಿಖಾ ತಂಡವನ್ನು ನೇಮಿಸಿತು. ಇದೊಂದು ಕಾಟಾಚಾರದ ಸಮಿತಿಯಾಗಿತ್ತು.

ಅಂತಿಮವಾಗಿ ಸಮಿತಿ ಈ ಹತ್ಯಾಕಾಂಡದಲ್ಲಿ ಮರಣ ಹೊಂದಿದವರ ಸಂಖ್ಯೆ 379 ಎಂದು ನಿರ್ಧರಿಸಿತು. ಇಂಡಿಯನ್ ನ್ಯಾಶನಲ್ ಕಾಂಗ್ರೆಸ್ ನಡೆಸಿದ ಅಂದಾಜಿನ ಪ್ರಕಾರ 1500ಕ್ಕೂ ಮೀರಿತ್ತು. ವಾಸ್ತವದಲ್ಲಿ ಈ ಸಂಖ್ಯೆ 2000ಕ್ಕಿಂತಲೂ ಅಧಿಕ ಎಂದು ಇತಿಹಾಸಕಾರರ ಅಭಿಪ್ರಾಯ.

ಈ ಘಟನೆ ಭಾರತದಲ್ಲಿ ಬ್ರಿಟಿಷ್ ಸಾಮ್ರಾಜ್ಯದ ವಿರುದ್ಧದ ಹೋರಾಟದ ದಿಕ್ಕನ್ನೇ ಬದಲಾಯಿಸಿತು. ಒಂದು ಶತಮಾನದ ಹಿಂದೆ ನಡೆದ ಈ ಘಟನೆಯನ್ನು ಇಂದು ನಿಂತು ನೋಡಿದರೆ ವಸಾಹತುಶಾಹಿಯು ತನ್ನ ಸಾಮ್ರಾಜ್ಯವನ್ನು ಉಳಿಸಲು ನಡೆಸಿದ ಕ್ರೌರ್ಯ, ಹಿಂಸೆ, ರಕ್ತಪಾತಗಳು ಕಣ್ಮುಂದೆ ಕಟ್ಟಿದಂತಾಗುತ್ತದೆ.

ಹತ್ಯಾಕಾಂಡದ ಪ್ರತ್ಯಕ್ಷದರ್ಶಿ 20ರ ಹರೆಯದ ಯುವಕ ಉಧಮ್ ಸಿಂಗ್ ತನ್ನ ತಾಯ್ನಾಡಿನ ಬಂಧುಗಳ ಹತ್ಯೆಗೆ ಕಾರಣರಾದವರನ್ನು ಬಲಿ ಪಡೆಯುವ ಶಪಥ ಮಾಡುತ್ತಾನೆ. ಈ ಘಟನೆ ಭಾರತದ ಸ್ವಾತಂತ್ರ್ಯ ಹೋರಾಟಕ್ಕೆ ಹೊಸ ಸ್ಫೂರ್ತಿಯನ್ನು ಕೊಟ್ಟಿತು. ಅಂದು ಬ್ರಿಟಿಷ್ ಸೈನ್ಯಾಧಿಕಾರಿ ಅಮಾಯಕ ಭಾರತೀಯರ ಮೇಲೆ ಹಾರಿಸಿದ ಒಂದೊಂದು ಗುಂಡೂ ಕೂಡ ಬ್ರಿಟಿಷ್ ಸಾಮ್ರಾಜ್ಯದ ಅಡಿಪಾಯವನ್ನು ಕೆಡವಿಹಾಕುವ ಗುಂಡುಗಳಾಗಿ ಪರಿವರ್ತನೆಯಾಯಿತು.

ಸೂತಕದ ಮಧ್ಯೆ ಹಠ ಮಾಡಿ ಅಲ್ಲಿಗೆ ತನ್ನ ತಂದೆಯೊಂದಿಗೆ ಧಾವಿಸಿದ ಒಬ್ಬ ಪುಟಾಣಿ ಪೋರ ಛಿದ್ರ-ಛಿದ್ರಗೊಂಡ ದೇಹಗಳನ್ನು ದುರುಗುಟ್ಟಾಗಿ ನಿಂತ. ಸ್ವತಃ ಕುಟುಂಬವೆಂದು ನಂಬಿದ್ದ ಭಾರತೀಯರನ್ನು ಆತ ಕಳೆದುಕೊಂಡ. ಮನಸ್ಸಿನ ಭಾವವನ್ನು ತಡೆ ಹಿಡಿದ ಆತ ಒಂದು ಹನಿ ಕಣ್ಣೀರು ಇಡಲಿಲ್ಲ, ಬದಲಾಗಿ ಆ ರಕ್ತದಲ್ಲಿ ಒಂದಾದ ಮಣ್ಣನ್ನು ಕೈಯಲ್ಲಿ ಹಿಡಿದು ಈ ಭಾರತದಿಂದ ಬ್ರಿಟಿಷರನ್ನು ಓಡಿಸುವ ಪಣತೊಟ್ಟ. ಈ ಛಲವಾದಿ ಬೇರಾರು ಅಲ್ಲ, ಮುಂದೊಂದು ದಿನ ಬ್ರಿಟಿಷರಿಗೆ ಸಿಂಹ ಸ್ವಪ್ನವಾದ ಕ್ರಾಂತಿಯ ಕಿಡಿ ಕೆಚ್ಚೆದೆಯ 'ಭಗತ್ ಸಿಂಗ್'.

ಈ ಹತ್ಯಾಕಾಂಡಕ್ಕೆ ಇಂದಿಗೆ 105 ವರ್ಷಗಳೇ ಸಂದಿವೆ. ಅಂದು ಬ್ರಿಟಿಷರ ದಬ್ಬಾಳಿಕೆಗೆ ಹುತಾತ್ಮರಾದ ಎಲ್ಲಾ ಭಾರತೀಯರನ್ನು ನೆನೆಸುತ್ತಾ, ನಾವು ಈ ಪೀಳಿಗೆಯಲ್ಲಿ ದೇಶಭಕ್ತಿಯನ್ನು ನರನಾಡಿಗಳಲ್ಲಿ ಹುರಿಗೊಳಿಸುವ ಪ್ರಯತ್ನ ಮಾಡಬೇಕಿದೆ.



– ಈಶ್ವರ ಎಸ್.ಮೆಡ್ಲೇರಿ.
ಲಕ್ಷ್ಮೇಶ್ವರ.

## ಏ.18, 19ರಂದು ಸಾಮಾನ್ಯ ಪ್ರವೇಶ ಪರೀಕ್ಷೆ: ಪ್ರತಿಬಂಧಕಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

2024ನೇ ಸಾಲಿನ ಇಂಜನೀಯರಿಂಗ್, ಕೃಷಿ ವಿಜ್ಞಾನ, ವೆಟರಿನರಿ, ಫಾರ್ಮಸಿ, ಬಿ.ಎಸ್.ಸಿ (ನರ್ಸಿಂಗ್) ಮುಂತಾದ ವೃತ್ತಿಪರ ಕೋರ್ಸುಗಳ ಪ್ರವೇಶಕ್ಕಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಎಪ್ರಿಲ್ 18 ಮತ್ತು 19 ರಂದು ನಡೆಸಲಿದೆ.

ಜಿಲ್ಲೆಯಲ್ಲಿ ಒಟ್ಟು 12 ಪರೀಕ್ಷಾ ಕೇಂದ್ರಗಳಿದ್ದು, ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡಲು ಪರೀಕ್ಷಾ ಕೇಂದ್ರಗಳ ಸುತ್ತಲೂ 200ಮೀಟರ್ ಪರಿಮಿತಿಯೊಳಗೆ ಎಪ್ರಿಲ್ 18 ಮತ್ತು 19ರಂದು ಬೆಳಿಗ್ಗೆ 9.30 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯ ನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝರಾಕ್ಸ್ ಅಂಗಡಿ, ಬುಕ್ ಸ್ಟಾಲ್, ಫೋ-ಟೋ ಕಾಪಿಯರ್‌ಗಳನ್ನು ಬಂದ ಮಾಡಲು ಆದೇಶಿಸಿದೆ.

ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೆ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯ ಒಳಗೆ ಯಾವುದೇ ರೀತಿಯ ಕೈಗಡಿಯಾರವನ್ನು ಕಟ್ಟಿಕೊಂಡು, ತೆಗೆದು-ಕೊಂಡು ಹೋಗುವಂತಿಲ್ಲ. ಅಭ್ಯರ್ಥಿಗಳು ಕ್ಯಾಲ್ಕುಲೇಟರ್ ಮತ್ತು ಟೇಬಲ್‌ಗಳನ್ನು ಪರೀಕ್ಷಾ ಸಮಯದಲ್ಲಿ ಉಪಯೋಗಿಸುವುದನ್ನು ನಿಷೇಧಿಸಿದೆ.

ಮೊಬೈಲ್ ಫೋನ್, ಬ್ಲೂಟೂಥ್, ಸ್ಲೈಡ್ ರೂಲ್ಸ್ , ವೈಟ್ ಫ್ಲ್ಯುಯಿಡ್ , ವೈರ್‌ಲೆಸ್ ಸೆಟ್ಸ್ , ಪೇಪರ್ ಚೀಟಿ , ಬುಕ್ಸ್ / ಪುಸ್ತಕ ಇತ್ಯಾದಿಗಳನ್ನು ತರುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಆದೇಶಿಸಿದ್ದಾರೆ.

## ಮೋದಿ ಮತ್ತೆ ಅಧಿಕಾರಕ್ಕೆ ಬಂದ 3 ತಿಂಗಳಲ್ಲಿ ವೆಗಾಸಿಟಿ- ನಾಯಂಡಹಳ್ಳಿ ಮೆಟ್ರೋ ಮಾರ್ಗಕ್ಕೆ ಅನುಮೋದನೆ: ತೇಜಸ್ವಿ ಸೂರ್ಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯ ರಾಜಧಾನಿಗೆ ಮೋದಿ ನೇತೃತ್ವದ ಬಿಜೆಪಿ ಸರ್ಕಾರದಿಂದ ಸಾಕಷ್ಟು ಅಭಿವೃದ್ಧಿ ಕಾರ್ಯಗಳಾಗಿದೆ. ಬಹುನಿರೀಕ್ಷಿತ ವೆಗಾಸಿಟಿಯಿಂದ ನಾಯಂಡಹಳ್ಳಿವರೆಗಿನ 24 ಕಿ.ಮೀ ಉದ್ದದ 3ನೇ ಹಂತದ ಮೆಟ್ರೋ ರೈಲು ಮಾರ್ಗಕ್ಕೆ ಮೋದಿ ಅವರು ಮತ್ತೊಮ್ಮೆ ಅಧಿಕಾರಕ್ಕೆ ಬಂದ 3 ತಿಂಗಳಲ್ಲೇ ಒಪ್ಪಿಗೆ ದೊರಕಿಸಿಕೊಡಲಾಗುವುದು ಎಂದು ಬಿಜೆಪಿ ಅಭ್ಯರ್ಥಿ ತೇಜಸ್ವಿ ಸೂರ್ಯ ಭರವಸೆ ನೀಡಿದ್ದಾರೆ.

ಜೆ.ಪಿ.ನಗರದ ಪಾಂಡುರಂಗ ನಗರದ ನಿವಾಸಿಗಳೊಂದಿಗೆ ಇಂದು ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿದ ಅವರು, ಸಂಚಾರ ದಟ್ಟಣೆ ನಿಯಂತ್ರಣಕ್ಕೆ 40 ವರ್ಷಗಳಿಂದ ಬೇಡಿಕೆಯಾಗಿದ್ದ ಸಬ್ ಅರ್ಬನ್ ರೈಲು ಯೋಜನೆಗೆ ಈಗಾಗಲೇ ಕೇಂದ್ರದಿಂದ ಒಪ್ಪಿಗೆ ದೊರೆತಿ-ದೆ. ಉಪನಗರ ವರ್ತುಲ ರಸ್ತೆ ಯೋಜನೆಗೂ ಮಂಜೂರಾತಿ ದೊರೆತಿದೆ. ಆರ್.ವಿ.ರಸ್ತೆಯಿಂದ ಎಲೆಕ್ಟ್ರಾನಿಕ್ ಸಿಟಿವರೆಗಿನ ಹಳದಿ ಮೆಟ್ರೋ ರೈಲು ಮಾರ್ಗ ಸೆಪ್ಟೆಂಬರ್‌ನಲ್ಲಿ ಆರಂಭಗೊಳ್ಳಲಿದೆ ಎಂದು ತಿಳಿಸಿದರು.

ಪ್ರಧಾನಿ ಅಮೆರಿಕಕ್ಕೆ ಭೇಟಿ ನೀಡಿದ್ದ ವೇಳೆ ಬೆಂಗಳೂರಿನಲ್ಲಿ ಅಮೆರಿಕ ದೂತವಾಸ ಕಚೇರಿ ಆರಂಭಕ್ಕೆ ಒಪ್ಪಿಗೆ ದೊರೆತಿದೆ. ಆದರೆ, ಕಾಂಗ್ರೆಸ್ ಸರ್ಕಾರ ಜಾಗ ನೀಡುತ್ತಿಲ್ಲ ಎಂದು ಆರೋಪಿಸಿದರು.

ಕೋವಿಡ್ ಸಾಂಕ್ರಾಮಿಕವನ್ನು ಎದುರಿಸುವಲ್ಲಿ ತಾವು ಹಾಗೂ ತಮ್ಮ ಕಚೇರಿಯ ಕಾರ್ಯನಿರ್ವಹಣೆ ಕುರಿತು ಇದೇ ಸಂದರ್ಭದಲ್ಲಿ ವಿವರಿಸಿದ ಅವರು, ಬೆಡ್ ಬುಕಿಂಗ್ ಪದ್ಧತಿಯಲ್ಲಿದ್ದ ಅಕ್ರಮಗಳನ್ನು ಬಯಲಿಗೆಳೆದು ವೈಪರೀತ್ಯಗಳನ್ನು ಸರಿಪಡಿಸಿದ ನಂತರ, 4 ಸಾವಿರಕ್ಕೂ ಅಧಿಕ ಹಾಸಿಗೆಗಳು ಸೋಂಕಿತರಿಗೆ ಲಭ್ಯವಾದವು. ದೇಶದಲ್ಲೇ ಅತಿ ದೊಡ್ಡ ಆಕ್ಸಿಜನ್ ಕಾನ್ಸಂಟ್ರೇಟರ್ ಬ್ಯಾಂಕ್ ಸ್ಥಾಪಿಸುವ ಮೂಲಕ ನೂರಾರು ಜನರ ಜೀವ ಉಳಿದಿದೆ ಎಂದು ತಿಳಿಸಿದರು.

ನಿಷ್ಕ್ರಿಯಗೊಂಡಿದ್ದ ನಾಲ್ಕು ಆಸ್ಪತ್ರೆಗಳನ್ನು ಮರು ನವೀಕರಣಗೊಳಿಸಿ ವೈದ್ಯಕೀಯ ಮೂಲಸೌಕರ್ಯಗಳನ್ನು ಹೆಚ್ಚಿಸಿ 350 ಐಸಿಯು ಹೆಚ್ಚುವರಿ ಬೆಡ್‌ಗಳನ್ನು ಒದಗಿಸಲಾಯಿತು. ಕ್ಷೇತ್ರದಲ್ಲಿ ಅತಿದೊಡ್ಡ ಲಸಿಕೆ ಅಭಿಯಾನ ನಡೆಸಲಾಯಿತು. ಇದರಿಂದ ಸುಮಾರು 28 ಲಕ್ಷ ನಾಗರಿಕರು ತ್ವರಿತವಾಗಿ ಉಚಿತ ಲಸಿಕೆ ಪಡೆಯಲು ಸಾಧ್ಯವಾಯಿತು ಎಂದು ಹೇಳಿದರು.

# ದ್ಯಾಮವ್ವ ದೇವಿಯ ಉತ್ಸವಕ್ಕೆ ಸಕಲ ಸಿದ್ಧತೆ

■ವಿಜಯಸಾಕ್ಷಿ ಸುದ್ದಿ, ರೋಣ

ಗ್ರಾಮದ ಆದಿ ದೇವತೆಯಾದ ದ್ಯಾಮವ್ವ ದೇವಿಯ ಮೂರು ದಿನಗಳ ಉತ್ಸವಕ್ಕೆ ಗ್ರಾಮ ಸನ್ನದ್ಧಗೊಂಡಿದೆ. ಗ್ರಾಮದಲ್ಲಿ ಮಳೆ-ಬೆಳೆ ಚೆನ್ನಾಗಿ ಬರಲಿ, ಗ್ರಾಮದ ಜನರು ಸೇರಿದಂತೆ ಪ್ರಾಣಿ-ಪಕ್ಷಿಗಳು ಆರೋಗ್ಯದಿಂದ ಬದುಕಲಿ ಎಂಬ ದೃಷ್ಟಿಯಿಂದ ಸತತ ಮೂರು ದಿನಗಳ ಕಾಲ ಗ್ರಾಮಸ್ಥರು ದ್ಯಾಮವ್ವ ದೇವಿಯ ಉತ್ಸವವನ್ನು ಅದ್ದೂರಿಯಿಂದ ಆಚರಿಸುತ್ತಾರೆ. ಈ ಮೊದಲು 2019ರಲ್ಲಿ ದೇವಿಯ ಉತ್ಸವವನ್ನು ಆಚರಿಸಲಾಗಿತ್ತು.

ಏಪ್ರಿಲ್ 14ರಂದು ಭೂಮಿತಾಯಿಗೆ ಹಾಲು ಎರೆಯುವುದು, 15ರಂದು 501 ಕುಂಭಮೇಳದೊಂದಿಗೆ ದೇವಿಯ ಮೇರವಣಿಗೆ ನಡೆಸುವುದು, ದೇವಿಯನ್ನು ಮರು ಪ್ರತಿಷ್ಠಾಪನೆ ಮಾಡುವುದು ಹಿಗೆ ಮೂರು ದಿನಗಳ ಕಾಲ ಸಂಭ್ರಮದಿಂದ ನಡೆಯುವ



ದೇವಿಯ ಜಾತ್ರಾ ಮಹೋತ್ಸವದಲ್ಲಿ ನಿರಂತರ ಅನ್ನಸಂತರ್ಪಣೆ ಕೂಡ ನೆರವೇರಲಿದೆ.

ಗ್ರಾಮದ ಸರಹದ್ದಿನ ಜಮೀನುಗಳಿಗೆ ಹಾಲು ಎರೆಯಲು ಹಾಗೂ ಬೆಳೆದ ಬೆಳೆ ಹುಲುಸಾಗಿ ಬರಲಿ ಎಂದು 2 ಸಾವಿರ ಲೀಟರ್‌ಗೂ ಅಧಿಕ ಹಾಲನ್ನು ಉಪಯೋಗಿಸಲಾಗುತ್ತದೆ. ಈ ಸಂಧರ್ಭದಲ್ಲಿ ಮಡಿಯಿಂದ ರೈತರು ಜಮೀನುಗಳಿಗೆ ತೆರಳುತ್ತಾರೆ. ಯಾವುದೇ ಬೇಧ-ಭಾವಗಳಿಲ್ಲದೆ ಎಲ್ಲರೂ ಭೂತಾಯಿಗೆ ಹಾಲು ಎರೆಯುತ್ತಾರೆ.

ಗ್ರಾಮದಲ್ಲಿ ಆಚರಿಸುತ್ತಿರುವ ದೇವಿಯ ಉತ್ಸವಕ್ಕೆ ವಿವಾಹವಾಗಿ ಬೇರೆ ಗ್ರಾಮಗಳಿಗೆ ತೆರಳಿದ ಎಲ್ಲ ಹೆಣ್ಣು ಮಕ್ಕಳು ಗ್ರಾಮಕ್ಕೆ ಆಗಮಿಸುತ್ತಾರೆ. ಅಲ್ಲದೆ ಜಾತ್ರಾ ಮಹೋತ್ಸವದಲ್ಲಿ ಜಾತಿ-ಧರ್ಮಗಳ ಜಂಜಾಟವಿಲ್ಲದೆ ಭಾಗಿಯಾಗುತ್ತಾರೆ. ದೇವಿಯ ದರ್ಶನ ಪಡೆಯುವ ಮಹಿಳೆಯರು ತನ್ನ ತವರು ಮನೆಯ ಏಳ್ಗೆಗೆ ಹಾರೈಸುತ್ತಾರೆ.

ಏಪ್ರಿಲ್ 14, 15, 16ರಂದು ಜರುಗುವ ದೇವಿಯ ಉತ್ಸವಕ್ಕೆ ಗ್ರಾಮ ಸಿದ್ದಗೊಂಡಿದೆ. ಮೂರು ದಿನಗಳ ಕಾಲ ದೇವಿಗೆ ವಿಶೇಷ ಪೂಜಾ ಕಾರ್ಯದ ಜೊತೆಗೆ ಅನ್ನಸಂತರ್ಪಣೆ ಕೂಡ ನಡೆಯುತ್ತದೆ. ಸರ್ವಧರ್ಮದವರು ದೇವಿಯ ಉತ್ಸವದಲ್ಲಿ ಭಾಗಿಯಾಗಿ ಕಾಯಿ-ಕರ್ಪೂರಗಳನ್ನು ಅರ್ಪಿಸುತ್ತಾರೆ ಎಂದು ಮಾಹಿತಿ ನೀಡುತ್ತಾರೆ ದೇವಸ್ಥಾನದ ಹಿರಿಯರು.

# ಶ್ರೀ ಜ. ಶಿವಾನಂದ ಪ.ಪೂ ವಿಜ್ಞಾನ ಕಾಲೇಜಿನ ಪಿಯು ಫಲಿತಾಂಶ





■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶ್ರೀ ಜಗದ್ಗುರು ಶಿವಾನಂದ ಪದವಿಪೂರ್ವ ವಿಜ್ಞಾನ ಕಾಲೇಜಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಒಟ್ಟು 65 ವಿದ್ಯಾರ್ಥಿಗಳಲ್ಲಿ 60 ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶೇ.92 ಫಲಿತಾಂಶವನ್ನು ದಾಖಲಿಸಿದ್ದಾರೆ.

11 ವಿದ್ಯಾರ್ಥಿಗಳು ಪ್ರಶಸ್ತಿ ಸಹಿತ ಪ್ರಥಮ ಶ್ರೇಣಿಯಲ್ಲಿ, 40 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ಶ್ರೇಯಾ ಕಬಾಡಿ ಕಾಲೇಜಿಗೆ ಪ್ರಥಮ ಸ್ಥಾನ, ಸೃಷ್ಟಿ ಜಕ್ಕಲಿ ದ್ವಿತೀಯ ಸ್ಥಾನ ಹಾಗೂ ಕಾವ್ಯಾ ಓದಿಸುಮಠ ಇವರು ತೃತೀಯ ಸ್ಥಾನ ಪಡೆದಿದ್ದಾರೆ.

ಕಾಲೇಜಿಗೆ ಕೀರ್ತಿ ತಂದ ಎಲ್ಲ ವಿದ್ಯಾರ್ಥಿಗಳಿಗೆ ಪೂಜ್ಯ ಶ್ರೀಗಳವರು, ವಿದ್ಯಾಸಂಸ್ಥೆಯ ಪದಾಧಿಕಾರಿಗಳಾದ ಬಿ.ಎಸ್. ಪಾಟೀಲ, ಡಾ. ಜಿ.ಬಿ. ಪಾಟೀಲ, ಕಾಲೇಜಿನ ಪ್ರಾಚಾರ್ಯ ಎಸ್.ವ್ಹಿ. ವರ್ಣೇಕರ, ಕಾಲೇಜಿನ ಸರ್ವ ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

# ದ್ವಿತೀಯ ಪಿಯುಸಿ ಉತ್ತಮ ಫಲಿತಾಂಶ








■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಕನಕದಾಸ ಶಿಕ್ಷಣ ಸಮಿತಿಯ ಕೆ.ಎಸ್.ಎಸ್. ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯದ ದ್ವಿತೀಯ ಪಿಯುಸಿ ಕಲಾ ವಿಭಾಗದಲ್ಲಿ ನೀಲಾ ನೆರೆಗಲ್ಲ 545 ಅಂಕ ಪಡೆದು ಪ್ರಥಮ ಸ್ಥಾನ, ಲಕ್ಷ್ಮಿ ಯಲಿಗಾರ 542 ಅಂಕ ಪಡೆದು ದ್ವಿತೀಯ ಸ್ಥಾನ, ಪ್ರತಿಭಾ ಹಳ್ಯಾಳ 527 ಅಂಕ ಪಡೆದು ತೃತೀಯ ಸ್ಥಾನ ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಮಹಾವಿದ್ಯಾಲಯದ ದ್ವಿತೀಯ ಪಿಯುಸಿ ವಾಣಿಜ್ಯ ವಿಭಾಗದಲ್ಲಿ ಲಕ್ಷ್ಮೀ ಬಂಗಾರಿ 538 ಅಂಕ ಪಡೆದು ಪ್ರಥಮ ಸ್ಥಾನ, ಹನಮಂತ ಮುಳಗುಂದ 504 ಅಂಕ ಪಡೆದು ದ್ವಿತೀಯ ಸ್ಥಾನ, ಭಾರತಿ ಹಕಾರಿ 501 ಅಂಕ ಪಡೆದು ತೃತೀಯ ಸ್ಥಾನ ಪಡೆಯುವ ಮೂಲಕ ಕಾಲೇಜಿಗೆ ಕೀರ್ತಿ ತಂದಿದ್ದಾರೆ.

## ಶ್ರೀ ಮಾರುತಿ ವ್ಯಾಯಾಮ ಶಾಲೆಯ ಆಶ್ರಯದಲ್ಲಿ ಎರಡು ದಿನಗಳ ಕುಸ್ತಿ ಪಂದ್ಯಾವಳಿ

# ಕುಸ್ತಿ ಕ್ರೀಡೆಯ ಕಡೆಗೆ ಗಮನ ನೀಡಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿಯ ಶ್ರೀ ಮಾರುತೇಶ್ವರ ಹೊಂಡ ತುಳುಕಿಸುವ ಕಾರ್ಯಕ್ರಮದ ಅಂಗವಾಗಿ ಹಾಗೂ ದಿ. ಪೈಲ್ವಾನ್ ಮೂಕಪ್ಪಜ್ಜ ಸಂಕನೂರ ಇವರ 16ನೇ ವರ್ಷದ ಪುಣ್ಯಸ್ಮರಣೋತ್ಸವದ ನೆನಪಿಗಾಗಿ ಎರಡು ದಿನಗಳವರೆಗೆ ನಡೆದ ಪ್ರಖ್ಯಾತ ಪೈಲ್ವಾನರ ಬಯಲು ಕುಸ್ತಿ ಸ್ಪರ್ಧೆಯಲ್ಲಿ ಜಕ್ಕಲಿಯ ಪೈಲ್ವಾನ್ ಬಸವರಾಜ ಹಡಪದ ಪ್ರತಿಸ್ಪರ್ಧಿ ಬೆಳಗಾವಿಯ ಹನಮಂತ ಪೈಲ್ವಾನ್‌ನನ್ನು ಚಿತ್ ಮಾಡುವ ಮೂಲಕ ವಿರುಪಾಕ್ಷಪ್ಪ ಅಜ್ಜಪ್ಪ ಪಲ್ಲೇದ ಅವರು ನೀಡಿದ ನಗದು 7001ರೂ.ಗಳ ಪ್ರಥಮ ಬಹುಮಾನವನ್ನು ತಮ್ಮದಾಗಿಸಿಕೊಂಡರು.

ಗ್ರಾಮದ ಬಸ್ ನಿಲ್ದಾಣದ ಹತ್ತಿರದ ತೋಟಪ್ಪನವರು ಕಡಗದವರ ಜಮೀನಿನಲ್ಲಿ ಶ್ರೀ ಮಾರುತಿ ವ್ಯಾಯಾಮ ಶಾಲೆಯ ಆಶ್ರಯದಲ್ಲಿ ಈ ಕುಸ್ತಿ ಪಂದ್ಯಗಳು ನಡೆದವು.

ಅತಿಥಿಗಳಾಗಿ ಪಾಲ್ಗೊಂಡಿದ್ದ ನಿವೃತ್ತ ಪ್ರಾಚಾರ್ಯ ಎಸ್.ಎಂ. ಕೋರಿಯವರ ಮಾತನಾಡಿ, ಗ್ರಾಮೀಣ ಸೊಗಡಿನ ಈ ಕ್ರೀಡೆಯನ್ನು ಉಳಿಸಿ ಬೆಳೆಸುವುದು ಇಂದಿನ ದಿನಗಳಲ್ಲಿನ ಅಗತ್ಯವಾಗಿದೆ.



ಎಲ್ಲರೂ ಕ್ರಿಕೆಟ್ ಮತ್ತಿತರ ಆಟಗಳನ್ನೇ ಆಡುತ್ತ ಹೋದರೆ ಮೈಗೆ ಕಸುವನ್ನು, ಬುದ್ಧಿಗೆ ಬಲವನ್ನು ನೀಡಿ ಸದೃಢರನ್ನಾಗಿ ಮಾಡುವ ಈ ಕುಸ್ತಿ ಕ್ರೀಡೆಯನ್ನು ಆಡುವವರು ಇಲ್ಲವಾಗುತ್ತದೆ. ಹೀಗಾಗಿ, ಪಾಲಕರು ತಮ್ಮ ಮಕ್ಕಳಿಗೆ ಕುಸ್ತಿ ಕ್ರೀಡೆಯ ಕಡೆಗೆ ಗಮನ ನೀಡುವಂತೆ ಪ್ರೋತ್ಸಾಹಿಸಬೇಕೆಂದು ಕರೆ ನೀಡಿದರು.

ಇಂದಿನ ದಿನಗಳಲ್ಲಿ ಕುಸ್ತಿ ನಶಿಸಿ ಹೋಗುತ್ತಿದೆ. ಇದಕ್ಕಾಗಿ ಯುವಕರು 'ನನ್ನ ನಡಿಗೆ ಕುಸ್ತಿಯೆಡೆಗೆ' ಎಂಬ ಪ್ರತಿಜ್ಞೆ ಮಾಡಿ ಕುಸ್ತಿಯನ್ನು, ಜೊತೆಗೆ ಗರಡಿ ಮನೆಗಳನ್ನು ಉಳಿಸುವ ಕಾರ್ಯಕ್ಕೆ ಮುಂದಾಗಬೇಕು. ಕಾಮನ್‌ವೆಲ್ತ್ ಕ್ರೀಡೆಗಳಲ್ಲಿ, ಒಲಂಪಿಕ್ ಕ್ರೀಡೆಗಳಲ್ಲಿ ಕುಸ್ತಿಗೆ ಮಾನ್ಯತೆ ಇರುವುದನ್ನು ಗಮನಿಸಬೇಕು. ಈಗಾಗಲೇ ವಿಶ್ವ ಮಟ್ಟದಲ್ಲಿ ಪ್ರೊ ಕಬ್ಬಡ್ಡಿಗೆ ಸಾಕಷ್ಟು ಮನ್ನಣೆ ಸಿಕ್ಕಿದೆ. ಹಾಗೆಯೇ ಒಂದಿಲ್ಲೊಂದು ದಿನ ಪ್ರೊ ಕುಸ್ತಿ ಪಂದ್ಯಗಳೂ ಬರಬಹುದು. ಅದಕ್ಕೆ ನೀವು ಈಗಿನಿಂದಲೇ ಸಿದ್ಧರಾಗಿ ಎಂದು ಯುವಕರಿಗೆ ಕಿವಿಮಾತು ಹೇಳಿದರು.

ಧಾರವಾಡದ ಅಭಿಷೇಕ ಪೈಲ್ವಾನ್, ಬೆಳಗಾವಿಯ ಪರಶುರಾಮ ಪೈಲ್ವಾನ್‌ನನ್ನು ಚಿತ್ ಮಾಡುವ ಮೂಲಕ ದ್ವಿತೀಯ ಬಹುಮಾನ ಗಳಿಸಿ, ಶ್ರೀಮತಿ ಗಂಗವ್ವ ದ್ಯಾಮಪ್ಪ ಜಂಗಣ್ಣವರ ನೀಡಿದ ನಗದು 5001ರೂ.ಗಳನ್ನು ಪಡೆದುಕೊಂಡರು. ತೃತೀಯ ಸ್ಥಾನವನ್ನು ಬೊಮ್ಮನಹಳ್ಳಿಯ ಪ್ರತೀಕ್ ಪೈಲ್ವಾನ್ ಲಕ್ಕುಂಡಿ ದಾನೇಶ ಪೈಲ್ವಾನ್‌ನನ್ನು ಚಿತ್ ಮಾಡುವ ಮೂಲಕ ನಿವೃತ್ತ ಸೈನಿಕ ಪ್ರಕಾಶ ಎಮ್. ಕೋರಿಯವರು ನೀಡಿದ ನಗದು 3001ರೂ.ಗಳ ಬಹುಮಾನವನ್ನು ಪಡೆದುಕೊಂಡರು.

ಬಹುಮಾನ ವಿತರಣಾ ಸಮಯದಲ್ಲಿ ಉಮೇಶ ಮೇಟಿ, ಪ್ರಕಾಶ ಕೋರಿ, ಮಲ್ಲಪ್ಪ ಪಲ್ಲೇದ, ಬಸಪ್ಪ ಕೊಪ್ಪದ, ಬಸವರಾಜ ಶ್ಯಾಶೆಟ್ಟಿ, ಭೀಮಪ್ಪ ತಳವಾರ, ಮುತ್ತಣ್ಣ ಕಮ್ಮಾರ, ಬಸವರಾಜ ಕಡಗದ, ವಿರುಪಾಕ್ಷಪ್ಪ ಪಲ್ಲೇದ, ರಾಮಣ್ಣಮಾಸ್ತಾರ ತಳವಾರ, ದ್ಯಾಮಣ್ಣ ಜಂಗಣ್ಣವರ, ಹನಮಪ್ಪ ಜೋಗಿ, ಲಕ್ಷ್ಮಣ ಕುಲಕರ್ಣಿ, ಕಲ್ಲಪ್ಪ ಮರಬಸಪ್ಪನವರ ಇನ್ನಿತರರು ಉಪಸ್ಥಿತರಿದ್ದರು. ಹಿರಿಯ ಕುಸ್ತಿ ಪಟುಗಳಾದ ಸಣ್ಣದ್ಯಾಮಣ್ಣ ಮಡಿವಾಳರ, ಚನ್ನಬಸಪ್ಪ ಸೂಡಿ, ಗಾಂಧೆಪ್ಪ ಕುರಿ, ಯಲ್ಲಪ್ಪ ಮಡಿವಾಳರ ಪಂದ್ಯಗಳ ನಿರ್ಣಾಯಕರಾಗಿ ಕಾರ್ಯ ನಿರ್ವಹಿಸಿದರು. ಪ್ರಕಾಶ ವಾಲಿ ಪಂದ್ಯಗಳ ವೀಕ್ಷಕ ವಿವರಣೆ ನೀಡಿದರು.

ಎರಡು ದಿನಗಳವರೆಗೆ ನಡೆದ ಸ್ಪರ್ಧೆಯಲ್ಲಿ ನೂರಕ್ಕೂ ಹೆಚ್ಚು ಕುಸ್ತಿಪಟುಗಳು ಪಾಲ್ಗೊಂಡಿದ್ದರು. ಪರ ಊರಿನ ಕುಸ್ತಿಪಟುಗಳಿಗೆ ಊಟ ಮತ್ತು ವಸತಿ ವ್ಯವಸ್ಥೆಯನ್ನು ಕಲ್ಪಿಸಲಾಗಿತ್ತು. ಪ್ರೇಕ್ಷಕರು ಸಿಳ್ಳೆ, ಕೇಕೆ, ಚಪ್ಪಾಳೆ ತಟ್ಟಿ ಕುಸ್ತಿಪಟುಗಳನ್ನು ಹುರಿದುಂಬಿಸುತ್ತಿದ್ದ ದೃಶ್ಯ ಕಂಡುಬಂದಿತು. ಬೆಳಗಾವಿ, ಚಿಕ್ಕನಾಳ, ಮಿಟ್ಲಕೋಡ್, ಕಲಘಟಗಿ, ಧಾರವಾಡ, ಕರಡಿಕೊಪ್ಪ, ಹಾತಲಗೇರಿ, ಶಿರೂಳ, ಶಲವಡಿ, ಪಡಚಿಂತಿ, ರೋಣ, ಹಳ್ಯಾಳ, ಲಕ್ಕುಂಡಿ, ಬೊಮ್ಮನಹಳ್ಳಿ, ಹುಯಿಲಗೋಳ ಹೀಗೆ ಅನೇಕ ಊರುಗಳಿಂದ ಆಗಮಿಸಿದ್ದ 50ಕ್ಕೂ ಹೆಚ್ಚು ಜೋಡಿಗಳು ರೋಮಾಂಚನಕಾರಿ ಆಟ ಪ್ರದರ್ಶಿಸಿದರು.

## ಸಂಭ್ರಮದಿಂದ ಜರುಗಿದ ಶ್ರೀಮಾಯಮ್ಮ ದೇವಿಯ ಹೋಳಿಗೆ ಜಾತ್ರೆ

# ಸಮ ಸಮಾಜ ನಿರ್ಮಾಣದ ಜಾತ್ರೆ

■ವಿಜಯಸಾಕ್ಷಿ ಸುದ್ದಿ, ಡಂಬಳ

ಗ್ರಾಮದ ಆರಾಧ್ಯ ದೇವತೆ ಶ್ರೀಮಾಯಮ್ಮದೇವಿ, ಶ್ರೀಅಕ್ಕಮ್ಮ ದೇವಿ ಹಾಗೂ ಶ್ರೀಬೀರಲಿಂಗೇಶ್ವರ ಜಾತ್ರಾ ಮಹೋತ್ಸವ(ಹೋಳಿಗೆ ಜಾತ್ರೆ) ಸಾವಿರಾರು ಭಕ್ತರ ಸಮ್ಮುಖದಲ್ಲಿ ನಡೆಯಿತು. ಯುಗಾದಿ ಹಬ್ಬದ ನಿಮಿತ್ತ ಮಾಯಮ್ಮ, ಅಕ್ಕಮ್ಮ ಹಾಗೂ ಬೀರಲಿಂಗೇಶ್ವರರಿಗೆ ವೇ.ಮೂ. ಸೋಮಶೇಖರಯ್ಯ ಗುರುವಿನ ಇವರಿಂದ ಅಭಿಷೇಕ, ಗಣಹೋಮ ಮತ್ತು ಆದಿಶಕ್ತಿ ಹೋಮ ವೇ. ಮೂ.ಗುರುಶಾಂತಯ್ಯ ಹಿರೇಮಠ ಇವರಿಂದ ನಡೆಯಿತು.

ನೂರಾರು ಮಹಿಳೆಯರು ಗುಂಪು ಗುಂಪಾಗಿ ಕುಳಿತುಕೊಂಡು ಮೈದಾ ಹಿಟ್ಟು ಕುದಿಸಿದ ಕಡಲೆ ಬೇಳೆ, ಬೆಲ್ಲವನ್ನು ಹದಮಾಡಿಕೊಳ್ಳುವುದು, ಒಲೆಯ ಮೇಲೆ ಬಿಸಿ ಬಿಸಿಯಾದ ಹೋಳಿಗೆ ಸಿದ್ದ ಪಡಿಸುವುದನ್ನು ನೋಡುವುದೇ ಸೊಗಸು. ಬಿಸಿ



ಬಿಸಿ ಹೋಳಿಗೆ, ಬದನೆಕಾಯಿ ಪಲ್ಲೆ, ಉಪ್ಪಿನಕಾಯಿ, ತುಪ್ಪ, ಹಪ್ಪಳ, ಸೋನಾ ಮಸೂರಿ ಅಕ್ಕಿಯಿಂದ ತಯಾರಿಸಿದ ಅನ್ನ ಸೇರಿದಂತೆ ರುಚಿ-ಶುಚಿಯಾದ ಪ್ರಸಾದವನ್ನು ಗ್ರಾಮದ ಸರ್ವ ಜನಾಂಗದವರು ಸಾವಿರಾರು ಸಂಖ್ಯೆಯಲ್ಲಿ ಕುಳಿತುಕೊಂಡು ಸ್ವೀಕರಿಸುತ್ತಾರೆ. ಹೋಳಿಗೆ ಪ್ರಸಾದ ರೂಪದಲ್ಲಿ ಸಮ ಸಮಾಜ ನಿರ್ಮಾಣ, ಜಾತಿ ವ್ಯವಸ್ಥೆಯ ನಿರ್ಮೂಲನೆ ಸೇರಿದಂತೆ ಸಮಾಜ ಪರಿವರ್ತನೆಯ ಆಶಯಗಳು ಜಾತ್ರೆಯಲ್ಲಿ ಗಮನ ಸೆಳೆಯುತ್ತದೆ.

ಸೇವಾ ಸಮಿತಿ ಅಧ್ಯಕ್ಷ ಜಗದೀಶ ಬಂಡಿ, ಉಪಾಧ್ಯಕ್ಷ ಬಸವರಾಜ ತಾರಿಕೊಪ್ಪ, ಕಾರ್ಯದರ್ಶಿ ಕಾಳಿಂಗರಾಜ ಕೆಂಪೋಡಿ, ಖಜಾಂಚಿ ಮಳ್ಳಪ್ಪ ಕೊಳ್ಳಾರ, ಗೋಣಿಬಸಪ್ಪ ಎಸ್. ಕೊರ್ಲಹಳ್ಳಿ, ಕುಬೇರಪ್ಪ ಕೊಳ್ಳಾರ, ಕೆ.ಕೆ. ಬಂಡಿ, ಸೋಮಣ್ಣ ಗುಡ್ಡದ, ವೆ.ಮೂ ಮುತ್ತು ಹಿರೇಮಠ, ಬಸವರಾಜ ಪೂಜಾರ, ಶಿವಪ್ಪ ಕೊಳ್ಳಾರ, ರೇವಣಸಿದ್ದಪ್ಪ ಕರಿಗಾರ, ದೇವಪ್ಪ ಪೂಜಾರ, ಬಸವರಾಜ ಬಂಡಿ, ಕುಬೇರಪ್ಪ ಬಂಡಿ, ಕುಬೇರಪ್ಪ ಕೊಳ್ಳಾರ, ಶ್ರೀಕಾಂತಪ್ಪ ಕೊಳ್ಳಾರ, ಯಲ್ಲಪ್ಪ ಕರಿಗಾರ, ಮಾರುತಿ ಹೊಂಬಳ, ರಾಮಪ್ಪ ಬಚನಹಳ್ಳಿ, ದೇವಪ್ಪ ಬಚನಹಳ್ಳಿ, ಶಂಕ್ರಪ್ಪ ಗುಡಿ, ರಮೇಶ ಯಂಡಿಗೇರಿ, ರವಿ ತಾರಿಕೊಪ್ಪ, ದೇವಪ್ಪ ದಾಳೀನ, ವಿನಯಕ ವರ್ಣೇಕರ, ದೇವಪ್ಪ ಬಾರಿಕೇರ, ಪ್ರಕಾಶ ಕೀಲಾರಿ ಸೇರಿದಂತೆ ಜಾತ್ರಾ ಕಮೀಟಿಯ ಎಲ್ಲಾ ಪದಾಧಿಕಾರಿಗಳು ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಜಾತ್ರಾ ಮಹೋತ್ಸವ ಹೋಳಿಗೆ ಉತ್ಸವವೆಂದು ಪ್ರತೀತಿ ಹೊಂದಿ, ಈ ಭಾಗದ ಜಾತಿ-ಮತ-ಪಂಥ ಮರೆತು ಗ್ರಾಮದ ಪ್ರತಿಯೊಬ್ಬರೂ ಪಾಲ್ಗೊಳ್ಳುವುದರಿಂದ ಈ ಭಾಗದಲ್ಲಿ ವಿಶಿಷ್ಠ ಜಾತೆ-ಯಾಗಿ ಗುರುತಿಸಿಕೊಳ್ಳುತ್ತಿದೆ. ಜಾತ್ರೆಯಲ್ಲಿ ಹಿರಿಯರು-ಕಿರಿಯರು ಎನ್ನದೆ ಶ್ರದ್ಧಾ ಭಕ್ತಿಯಿಂದ ಶ್ರಮಿವಹಿಸಿ ದುಡಿಯುತ್ತಾರೆ ಎನ್ನುತ್ತಾರೆ ಜಿಲ್ಲಾ ಪಂಚಾಯತಿ ಮಾಜಿ ಉಪಾಧ್ಯಕ್ಷ ಹಾಗೂ ಸಮಾಜದ ಹಿರಿಯರಾದ ಬೀರಪ್ಪ ಎಸ್ ಬಂಡಿ.

# ಶ್ರೀ ಅನ್ನದಾನೇಶ್ವರ ಕಾಲೇಜು ದ್ವಿತೀಯ ಪಿಯುಸಿ ಫಲಿತಾಂಶ











■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಅನ್ನದಾನೇಶ್ವರ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಪದವಿಪೂರ್ವ ಕಾಲೇಜಿನ 2023-24ರ ದ್ವಿತೀಯ ಪಿಯುಸಿ ಫಲಿತಾಂಶವು ಶೇ. 99 ಆಗಿದೆ ಎಂದು ಪ್ರಾಚಾರ್ಯ ವೈ.ಸಿ. ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕಲಾ ವಿಭಾಗದಲ್ಲಿ ಶೇ. 98.84, ವಾಣಿಜ್ಯ ವಿಭಾಗದಲ್ಲಿ ಶೇ. 98.88, ವಿಜ್ಞಾನ ವಿಭಾಗದಲ್ಲಿ 98.49 ಫಲಿತಾಂಶ ಬಂದಿದೆ. ಪರೀಕ್ಷೆಗೆ ಹಾಜರಾದ 751 ವಿದ್ಯಾರ್ಥಿಗಳಲ್ಲಿ 741 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. 293 ಡಿಸ್ಟಿಂಕ್ಷನ್ ಆಗಿದ್ದು, 407 ಪ್ರಥಮ ಶ್ರೇಣಿ, 39 ದ್ವಿತೀಯ ಶ್ರೇಣಿ ಹಾಗೂ 2 ವಿದ್ಯಾರ್ಥಿಗಳು ತೃತೀಯ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ ಎಂದು ತಿಳಿಸಿದ್ದಾರೆ.

ಪದವಿಪೂರ್ವ ಮಹಾವಿದ್ಯಾಲಯದ ಫಲಿತಾಂಶವು ಕಳೆದ 12 ವರ್ಷಗಳಿಂದ ಏರಿಕೆಯಾಗುತ್ತಲಿದೆ. ಇದಕ್ಕೆಲ್ಲ ನಮ್ಮ ಸಿಬ್ಬಂದಿಯವರ ನಿರಂತರ ಪರಿಶ್ರಮ ಮತ್ತು ನಮ್ಮ ಕಾರ್ಯಗಳಿಗೆ ಬೆನ್ನೆಲುಬಾಗಿ ನಿಂತಿರುವ ಆಡಳಿತ ಮಂಡಳಿ ಹಾಗೂ ಲಿಂ. ಅಭಿನವ ಅನ್ನದಾನ ಮಹಾಸ್ವಾಮಿಗಳ ಹಾಗೂ ಈಗಿನ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳ ಆಶೀರ್ವಾದ ಮತ್ತ ಶ್ರದ್ಧೆಯಿಂದ ಓದಿದ ವಿದ್ಯಾರ್ಥಿಗಳ ಪರಿಶ್ರಮವೇ ಕಾರಣ ಎಂದು ತಿಳಿಸಿದ್ದಾರೆ.

ವಿಭಾಗವಾರು ಫಲಿತಾಂಶ ಹೀಗಿದೆ. ಕಲಾ ವಿಭಾಗ- ಬಸಮ್ಮ ಜಗ್ಗಲ (585) ಪ್ರಥಮ, ರಶ್ಮೀ ಮಮಟಗೇರಿ (577) ದ್ವಿತೀಯ, ನಾಗರಾಜ (567) ತೃತಿಯ. ವಾಣಿಜ್ಯ ವಿಭಾಗ- ಆನಂದ ಗಡಗಿ (577) ಪ್ರಥಮ, ಲಕ್ಷ್ಮೀ ಕೋಡಿಕೊಪ್ಪಮಠ (577) ಪ್ರಥಮ, ಮಧು ಕುಂಬಾರ (574) ದ್ವಿತೀಯ, ನಿಖಿಲ್‌ಕುಮಾರ ಕಮ್ಮಾರ (574) ದ್ವಿತೀಯ, ಬಂಗಾರಪ್ಪ ಗಡೇದ (570) ತೃತೀಯ. ವಿಜ್ಞಾನ ವಿಭಾಗ- ಪುಷ್ಪಾ ಅಂಗಡಿ (585) ಪ್ರಥಮ, ಅನ್ನಪೂರ್ಣ ಮುಗಳಿ (581) ದ್ವಿತೀಯ, ಶರಣಗೌಡ ಪೊಲೀಸ್‌ಪಾಟೀಲ (579) ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ.

# ಕಡ್ಡಾಯ ಮತದಾನದ ಜಾಗೃತಿ ಮೂಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಸಂವಿಧಾನವು ಕೊಡಮಾಡಿದ ಮತದಾನ ಹಕ್ಕನ್ನು ಪ್ರತಿ ಮತದಾರನೂ ಚಲಾಯಿಸಿ ಸದೃಢ ಭಾರತ ನಿರ್ಮಾಣಕ್ಕೆ ಅವಕಾಶ ಮಾಡಿಕೊಟ್ಟಾಗಲೇ ಅವನೊಬ್ಬ 'ನಿಜ ಪ್ರಜೆ' ಅಥವಾ 'ನಿಜ ಭಾರತೀಯ' ಎನಿಸಿಕೊಳ್ಳಲು ಸಾಧ್ಯವೆಂದು ಸ್ಟೂಡೆಂಟ್ ಎಜುಕೇಶನ್ ಸಂಸ್ಥೆಯ ಚೆರಮನ್ ಪ್ರೊ. ರಾಜೇಶ ಕುಲಕರ್ಣಿ ಅಭಿಪ್ರಾಯಪಟ್ಟರು.

ಸನ್ಮಾರ್ಗ ಪದವಿಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ವಿದ್ಯಾರ್ಥಿಗಳು ನಗರದ 35ನೇ ವಾರ್ಡಿನಲ್ಲಿ ಕೈಗೊಂಡ 'ಮತದಾನಜಾಗೃತಿ ರ್‍ಯಾಲಿ'ಯನ್ನು ಉದ್ದೇಶಿಸಿ ಮಾತನಾಡಿದ ಅವರು, ಮತದಾನ ಪ್ರಾಮುಖ್ಯತೆಯನ್ನು ಇತರರಿಗೂ ತಿಳಿಸಿಕೊಟ್ಟು ಕಡ್ಡಾಯ ಮತದಾನ ಮಾಡಲು ವಿದ್ಯಾರ್ಥಿಗಳು ತಮ್ಮ ಪಾಲಕರಿಗೆ, ಅಕ್ಕಪಕ್ಕದ ಜನರಿಗೆ ಜಾಗೃತಿ ನೀಡಲು ಸಲಹೆ



ನೀಡಿದರು.

ಪ್ರಾಚಾರ್ಯ ಪ್ರೊ. ಉಡುಪಿ ದೇಶಪಾಂಡೆ ಮಾತನಾಡಿ, ಯಾವುದೇ ಆಸೆ-ಆಮಿಷಗಳಿಗೆ ಬಲಿಯಾಗದೇ, ಯಾವುದೇ ಪಕ್ಷ, ವ್ಯಕ್ತಿಯ ಪ್ರಚೋದನೆಗೆ ಒಳಗಾಗದೇ ಜಾತಿ, ಮತ, ಕುಲ ಧರ್ಮಾಂಧತೆಯ ಮೌಢ್ಯತೆಯಲ್ಲಿ ಬೀಳದೆ ಮತದಾನ ಮಾಡಿದಾಗ ಅದು ಪವಿತ್ರ ಎನಿಸಿಕೊಳ್ಳುತ್ತದೆ. ನಾಡಾಭಿಮಾನ, ದೇಶಾಭಿಮಾನ, ನೆಲ ಜಲ ಉಳಿವಿಗೆ, ದೇಶಾಭಿವೃದ್ಧಿಗೆ ಶ್ರಮಿಸುವ ಸಮರ್ಥ ನಾಯಕರನ್ನು ಆಯ್ಕೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

ಕನ್ನಡ ಉಪನ್ಯಾಸಕ ಪ್ರೊ. ಹೇಮಂತ ದಳವಾಯಿಯವರ ನೇತೃತ್ವದಲ್ಲಿ ಜರುಗಿದ ರ್‍ಯಾಲಿಯಲ್ಲಿ ಆಡಳಿತ ಮಂಡಳಿಯ ಪದಾಧಿಕಾರಿಗಳಾದ ಪ್ರೊ. ರೋಹಿತ ಒಡೆಯರ್, ರಾಹುಲ್ ಒಡೆಯರ್, ಪ್ರೊ. ಸೈಯದ್ ಮತೀನ್ ಮುಲ್ಲಾ, ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ಕಾಲೇಜಿನ ಎಲ್ಲ ಬೋಧಕ-ಬೋಧಕೇತರ ಸಿಬ್ಬಂದಿ, ಹಾಗೂ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಜಮ್ಮು ಕಾಶ್ಮೀರಕ್ಕೆ ಶೀಘ್ರದಲ್ಲೇ ವಿಧಾನಸಭೆ ಚುನಾವಣೆ, ರಾಜ್ಯ ಸ್ಥಾನಮಾನ: ಮೋದಿ ಭರವಸೆ

■ವಿಜಯಸಾಕ್ಷಿ ಸುದ್ದಿ, ಉಧಂಪುರ

ಜಮ್ಮು-ಕಾಶ್ಮೀರಕ್ಕೆ ಶೀಘ್ರದಲ್ಲೇ ರಾಜ್ಯ ಸ್ಥಾನಮಾನ ನೀಡುವುದರ ಜತೆಗೆ ವಿಧಾನಸಭಾ ಚುನಾವಣೆಗಳನ್ನು ಕೂಡಾ ನಡೆಸಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ಭರವಸೆ ನೀಡಿದರು. ಕೇಂದ್ರ ಸಚಿವ ಮತ್ತು ಲೋಕಸಭಾ ಚುನಾವಣೆಯ ಬಿಜೆಪಿ ಅಭ್ಯರ್ಥಿ ಜಿತೇಂದ್ರ ಸಿಂಗ್ ಅವರಿಗೆ ಬೆಂಬಲ ಸೂಚಿಸಲು ಉಧಂಪುರದಲ್ಲಿ ಇಂದು ಸಾರ್ವಜನಿಕ ಸಮಾವೇಶ ಉದ್ದೇಶಿಸಿ ಅವರು ಮಾತನಾಡಿದರು.

ಭಯೋತ್ಪಾದನೆ, ಮುಷ್ಕರ, ಕಲ್ಲು ತೂರಾಟ ಮತ್ತು ಗಡಿಯಾಚೆಗಿನ ಗುಂಡಿನ ದಾಳಿಯ ಭಯವಿಲ್ಲದೆ ಲೋಕಸಭೆ ಚುನಾವಣೆಗೆ ಸಾಕ್ಷಿ ಯಾಗಲಿರುವ ಜಮ್ಮು ಮತ್ತು ಕಾಶ್ಮೀರಕ್ಕೆ ರಾಜ್ಯ ಸ್ಥಾನಮಾನವನ್ನು ಮರುಸ್ಥಾಪಿಸಲು ನಮ್ಮ ಸರ್ಕಾರ ಯೋಚಿಸುತ್ತಿದೆ. ವಿಧಾನಸಭಾ ಚುನಾವಣೆ ಕೂಡ ನಡೆಯಲಿದೆ.

ಶೀಘ್ರದಲ್ಲೇ ನಾವೆಲ್ಲರೂ ಇದನ್ನು ನೋಡಲಿದ್ದೇವೆ ಎಂದರು.

# ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಬಿಸಿಲಿನ ತಾಪಮಾನ ಏರಿಕೆಯಾಗುತ್ತಿದೆ. ಇಂತಹ ಸಂದರ್ಭದಲ್ಲಿ ಕುಡಿಯುವ ನೀರಿನ ಸಮಸ್ಯೆ ಗಾಯದ ಮೇಲೆ ಬರೆ ಎಳೆದಂತಾಗಿದೆ. ನಗರದ ಸ್ಲಂ ಪ್ರದೇಶದ ಜನರು ಹಾಗೂ ಮಧ್ಯಮ ವರ್ಗದ ಜನರು ಹನಿ ನೀರಿಗಾಗಿ ನಿತ್ಯ ಪರದಾಡುವಂತ ಸ್ಥಿತಿ ನಿರ್ಮಾಣವಾಗಿದೆ.

ನೀರಿನ ಸಮಸ್ಯೆ ಕಂಡೂ ಕಾಣದಂತೆ ವರ್ತಿಸುತ್ತಿರುವ ನಗರಸಭೆ ಅಧ್ಯಕ್ಷರ ಮತ್ತು ಪೌರಾಯುಕ್ತರ ಕ್ರಮ ಖಂಡನೀಯ ಎಂದು ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪ್ರಕಟಣೆ ನೀಡಿರುವ ಅವರು, ಒಂದು ತಿಂಗಳಿಂದ ಜನರಿಗೆ ನೀರು ಸಿಗದೇ ಸಾಕಷ್ಟು ಸಮಸ್ಯೆ ಅನುಭವಿಸುತ್ತಿದ್ದಾರೆ. ಲೋಕಸಭಾ ಚುನಾವಣೆಯ ಪ್ರಚಾರದ ಗುಂಗಿನಲ್ಲಿರುವ ನಮ್ಮ ಜನಪ್ರತಿನಿಧಿಗಳು ಜನರ ಕುಡಿಯುವ ನೀರಿನ ಸಮಸ್ಯೆಗೆ ಸರಿಯಾಗಿ ಸ್ಪಂದಿಸುತ್ತಿಲ್ಲ. ನಗರಸಭೆಯಿಂದ ಕಾಟಾಚಾರಕ್ಕಾಗಿ ನೀರಿನ ಟ್ಯಾಂಕರ್‌ಗಳನ್ನು ನಗರದ ವಾರ್ಡ್‌ಗಳಿಗೆ ಬಿಡುತ್ತಿದ್ದಾರೆ.



ಪ್ರತಿ ವರ್ಷಕ್ಕಿಂತ ಈ ವರ್ಷದ ತಾಪಮಾನ ತುಂಬಾ ಹೆಚ್ಚು ಇರುವುದರಿಂದ ಜನರಿಗೆ ಕುಡಿಯುವ ನೀರಿನ ಅವಶ್ಯಕತೆ ಹೆಚ್ಚಾಗಿದೆ. ಕೂಡಲೇ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಗದಗ-ಬೆಟಗೇರಿ ಅವಳಿ ನಗರದಲ್ಲಿ ಉಂಟಾಗಿರುವ ಕುಡಿಯುವ ನೀರಿನ ಸಮಸ್ಯೆಗಳಿಗೆ ಸ್ಪಂದಿಸಿ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು ಎಂದು ಗದಗ ಜಿಲ್ಲಾ ಸ್ಲಂ ಸಮಿತಿಯ ಕಾರ್ಯದರ್ಶಿ ಅಶೋಕ ಕುಸಬಿ, ಉಪಾಧ್ಯಕ್ಷ ರವಿಕುಮಾರ ಬೆಳಮಕರ ಆಗ್ರಹಿಸಿದ್ದಾರೆ.

### 'ಕಲೆಗೆ ಕಣ್ಣಿತ್ತ ಪೂಜ್ಯರು' 13ನೇ ರಾಜ್ಯ ಮಟ್ಟದ ಕವಿಗೋಷ್ಠಿ

## ಕವಿತೆಗಳ ಆಹ್ವಾನ

■ **ವಿಜಯಸಾಕ್ಷಿ ಸುದ್ದಿ, ಗದಗ**


ಡಾ. ಪಂಡಿತ ಪುಟ್ಟರಾಜ ಸೇವಾ ಸಮಿತಿ ಗದಗ ಅರ್ಪಿಸುವ, ಹಾನಗಲ್ ಗುರುಕುಮಾರ ಮಹಾಸ್ವಾಮಿಗಳ, ಗಾನಯೋಗಿ ಪಂ. ಪಂಚಾಕ್ಷರಿ ಗವಾಯಿಗಳವರ, ಪದ್ಮಭೂಷಣ ಡಾ. ಪಂ. ಪುಟ್ಟರಾಜ ಶಿವಯೋಗಿ ಕವಿ ಗವಾಯಿಗಳವರ ಕುರಿತಾಗಿ ರಚಿಸಿದ 'ಕಲೆಗೆ ಕಣ್ಣಿತ್ತ ಪೂಜ್ಯರು' 13ನೇ ರಾಜ್ಯ ಮಟ್ಟದ ಕವಿಗೋಷ್ಠಿಯನ್ನು ಮೇ 12ರ ಬೆಳಿಗ್ಗೆ 11 ಗಂಟೆಗೆ ದಾವಣಗೆರೆಯ ಬಾಡ ಕ್ರಾಸ್‌ನಲ್ಲಿರುವ ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ ಏರ್ಪಡಿಸಲಾಗಿದೆ.



ಪೂಜ್ಯತ್ರಯರ ಕುರಿತಾಗಿ ರಚಿಸಿದ ಸ್ವರಚಿತ ಕವನ ವಾಚನ ಮಾಡಲು ಆಸಕ್ತ ಕವಿಗಳು ತಮ್ಮ ಹೆಸರು ನೋಂದಾಯಿಸಿಕೊಳ್ಳಲು ಕೋರಲಾಗಿದೆ. ಪೂಜ್ಯತ್ರಯರಲ್ಲಿ ಯಾರಾದರೂ ಒಬ್ಬರ ಕುರಿತು ರಚಿಸಿದ ಸ್ವರಚಿತ ಕವನ ಮಾತ್ರ ವಾಚಿಸಲು ಅವಕಾಶವಿರುತ್ತದೆ. ವಾಚಿಸಲಿರುವ ಒಂದು ಅಥವಾ ಮೂರು ಕವನಗಳನ್ನು ಕಳಿಸಿಕೊಟ್ಟು ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ. ಆಯ್ಕೆಯಾದ ಕವನಗಳ ಕವಿಗಳನ್ನು ಮಾತ್ರ ಆಹ್ವಾನಿಸಲಾಗುವುದು.

ಭಾಗವಹಿಸಿದ ಕವಿಗಳಿಗೆ ಅಭಿನಂದನಾ ಪತ್ರ, ಪುಸ್ತಕ ಕಾಣಿಕೆಯೊಂದಿಗೆ ಸನ್ಮಾನಿಸಿ ಗೌರವಿಸಲಾಗುವುದು. ದೂರದ ಊರುಗಳಿಂದ ಬರುವ ಕವಿಗಳಿಗೆ ಊಟ ಮತ್ತು ಸಾಮೂಹಿಕ ವಸತಿ ಒದಗಿಸಲಾಗುವುದು. ಭಾಗವಹಿಸಲು ಆಸಕ್ತರು ತಮ್ಮ ಪೂರ್ಣ ಹೆಸರು,ಅಂಚೆ ವಿಳಾಸ ತಿಳಿಸಿ, ಗುಣಮಟ್ಟದ ಒಂದು ಭಾವಚಿತ್ರದೊಂದಿಗೆ ವಾಣಿ ಬಸವರಾಜ–ದಾವಣಗೆರೆ, ಮೊ–9902052121/ 9886717732 ವಾಟ್ಸಾಪ್ ಸಂಖ್ಯೆಗೆ ಕಳಿಸಿಕೊಡಬಹುದು. ಕರೆಗಳನ್ನು ಸ್ವೀಕರಿಸುವುದಿಲ್ಲ. ಹೆಸರು ನೋಂದಾಯಿಸಿಕೊಳ್ಳಲು ಕೊನೆಯ ಏಪ್ರಿಲ್ 30 ಆಗಿದೆ ಎಂದು ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ರಾಜ್ಯ ಸಂಘಟನಾ ಕಾರ್ಯದರ್ಶಿ ಶಿವಬಸಯ್ಯ ಪಂ.ಚರಂತಿಮಠ ದಾವಣಗೆರೆ ಇವರು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಮೂಲಭೂತ ಸೌಕರ್ಯ ಕಲ್ಪಿಸಿ



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಇಟ್ಟಿಗೆ ಕೆರೆಗೆ ಹೊಂದಿಕೊಂಡಿರುವ ವಿದ್ಯಾನಗರ, ಪುರಾಣಿಕಮಠ ಬಡಾವಣೆಗೆ ರಸ್ತೆ ಸಂಪರ್ಕ ಮತ್ತು ನೀರಿನ ಸೌಲಭ್ಯ ಕಲ್ಪಿಸಬೇಕು ಎಂದು ಆಗ್ರಹಿಸಿ ಸ್ಥಳೀಯ ನಿವಾಸಿಗಳು ಶುಕ್ರವಾರ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಅವರಿಗೆ ಮನವಿ ಸಲ್ಲಿಸಿದರು.

ಈ ಬಡಾವಣೆಯಲ್ಲಿ ಸಾಕಷ್ಟು ಮನೆಗಳು ನಿರ್ಮಾಣವಾಗಿದ್ದು, ಬಡಾವಣೆಗೆ ಸಂಪರ್ಕ ಕಲ್ಪಿಸಲು ರಸ್ತೆಗಳಿಲ್ಲ. ಬಡಾವಣೆ ಹಾಗೂ ಸವಣೂರು ರಸ್ತೆ ಸಂಪರ್ಕಿಸಲು ಏಕೈಕ ರಸ್ತೆ ಇದ್ದು ಅದು ಸಹ ಸರಿಯಾಗಿಲ್ಲ. ನೀರಿನ ವ್ಯವಸ್ಥೆ ಕಲ್ಪಿಸುವುದು ಅತ್ಯವಶ್ಯವಾಗಿದೆ ಎಂಬ ಆಗ್ರಹವನ್ನು ಮನವಿ ಪತ್ರದ ಮೂಲಕ ಮಾಡಿದರು.

ಮನವಿ ಸ್ವೀಕರಿಸಿದ ಮುಖ್ಯಾಧಿಕಾರಿ ಮಹೇಶ ಹಡಪದ, ಸದರಿ ಸಮಸ್ಯೆಗಳಿಗೆ ಶೀಘ್ರ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಆಡಳಿತ ಮಂಡಳಿಯೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಈ ವೇಳೆ ಎಂ.ಎಂ. ಛತ್ರದ, ನಾಗಪ್ಪ ಸಾತಪುತೆ, ಶಶಿಧರ ಮಳಲಿ, ಫಕ್ಕೀರೇಶ ಓದಣ್ಣನವರ, ಇಂದಿರಾ ಸಾತಪುತೆ, ರಾಘು ಸಾತಪುತೆ, ಎಂ.ಆರ್. ಹಿರೇಮಠ, ಡಾ. ವಿ.ಜಿ. ದೇಸಾಯಿ, ಅನೂಷಾ ಮಳಲಿ, ಗಿರೀಶ ಕುಬಸದ, ಕವಿತಾ ನಡುವಿನಮನಿ ಸೇರಿದಂತೆ ವಾರ್ಡಿನ ನಿವಾಸಿಗಳು ಹಾಜರಿದ್ದರು.

### ಬೃಹತ್ ರೋಡ್ ಶೋ, ಯುವ ಸಮಾವೇಶದ ಪೂರ್ವಭಾವಿ ಸಭೆಯಲ್ಲಿ ಭರತ ಬಸವರಾಜ ಬೊಮ್ಮಾಯಿ

## ದೇಶದ ಅಭಿವೃದ್ಧಿಗಾಗಿ ಬಿಜೆಪಿಯನ್ನು ಗೆಲ್ಲಿಸಿ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮೇ 7ರಂದು ನಡೆಯುವ ಭವ್ಯ ಭಾರತದ ಭವಿಷ್ಯದ ಚುನಾವಣೆಯಲ್ಲಿ ಯಾವುದೇ ಜಾತಿ, ಧರ್ಮ, ಬೇಧ–ಭಾವ ಎಣಿಸದೇ ಎಲ್ಲರೂ ಪ್ರಧಾನಮಂತ್ರಿ ನರೇಂದ್ರ ಮೋದಿಯವರಿಗೆ ಮತ್ತೊಮ್ಮೆ ಅವಕಾಶ ಕೊಡೋಣ ಎಂದು ಭರತ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ಶುಕ್ರವಾರ ಪಟ್ಟಣದ ರಂಭಾಪುರಿ ಜಗದ್ಗುರು ವೀರ ಗಂಗಾಧರ ಸಮುದಾಯ ಭವನದಲ್ಲಿ ಹಾವೇರಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರ ಚುನಾವಣಾ ಪ್ರಚಾರಾರ್ಥವಾಗಿ ಭಾರತೀಯ ಜನತಾ ಪಾರ್ಟಿ ಶಿರಹಟ್ಟಿ ಮಂಡಲ, ಲಕ್ಷ್ಮೇಶ್ವರ ನಗರ ಘಟಕದಿಂದ ಏ.14ರಂದು ಗದಗ ನಗರದಲ್ಲಿ ಆಯೋಜಿಸಿರುವ ಬೃಹತ್ ರೋಡ್ ಶೋ ಮತ್ತು ಯುವ ಸಮಾವೇಶದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.



ಹಾವೇರಿ ಕ್ಷೇತ್ರದಲ್ಲಿ ಮಹಿಳೆಯರಿಗೆ, ಯುವಕರಿಗೆ ಸ್ಕಿಲ್ ಡೆವಲಪ್‌ಮೆಂಟ್ ತರಬೇತಿ ನೀಡಿ ಟೆಕ್ಸ್‌ಟೈಲ್ ಉದ್ಯಮದಲ್ಲಿ ಉದ್ಯೋಗ ಕಲ್ಪಿಸುವ ಕೆಲಸವನ್ನು ಬಸವರಾಜ ಬೊಮ್ಮಾಯಿ ಮಾಡುತ್ತಿದ್ದಾರೆ. ಅವರು ಭವಿಷ್ಯದಲ್ಲಿ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುವ ಸಂಕಲ್ಪ ಮಾಡಿದ್ದು, ಮೋದಿಯವರ ಕೈ ಬಲಬಡಿಸಲು ಬಿಜೆಪಿಗೆ ಮತನೀಡಿ ಎಂದು ಭರತ ಬಸವರಾಜ ಬೊಮ್ಮಾಯಿ ಮನವಿ ಮಾಡಿದರು.

ದೇಶದ ಅಭಿವೃದ್ಧಿಯ ಪಕ್ಷ ಬಿಜೆಪಿಗೆ ಮತದಾನ ಮಾಡಿ, ಮಾಡಿಸುವ ಸಂಕಲ್ಪ ಮಾಡಬೇಕಿದೆ. ನರೇಂದ್ರ ಮೋದಿ ಕೋವಿಡ್ ಸಂಕಷ್ಟದಲ್ಲಿ ಭಾರತೀಯರನ್ನು ಸಂರಕ್ಷಿಸಿದ್ದಾರೆ. ಕೃಷಿ, ಆರೋಗ್ಯ, ಶಿಕ್ಷಣ, ನೀರು, ಆಹಾರೋತ್ಪಾದನೆ, ತಂತ್ರಜ್ಞಾನ ಕ್ಷೇತ್ರದ ಅಭಿವೃದ್ಧಿಯಿಂದ ವಿಶ್ವದ ದೊಡ್ಡ ದೇಶಗಳು ಇಂದು ಮೋದಿಯವರ ನಾಯಕತ್ವವನ್ನು ಕೊಂಡಾಡಿದ್ದಾರೆ. ರೈತರು, ಮಹಿಳೆಯರು, ಬಡವರು, ಯುವಕರ ಪರವಾಗಿ ಮತ್ತು ದೇಶದ ಅಭಿವೃದ್ಧಿ, ರಕ್ಷಣೆಗಾಗಿ ಹಗಲಿರುಳು ನಿಸ್ವಾರ್ಥವಾಗಿ ಕೆಲಸ ಮಾಡುವ ಮೋದಿಯವರನ್ನು ಬಿಟ್ಟುಕೊಟ್ಟರೆ ಭವಿಷ್ಯದಲ್ಲಿ ಪಶ್ಚಾತ್ತಾಪ ಪಡಬೇಕಾಗುತ್ತದೆ ಎಂದರು.

ಶಾಸಕ ಡಾ.ಚಂದ್ರು ಲಮಾಣಿ ಮಾತನಾಡಿ, ಏ.14ರಂದು ಗದಗ ನಗರದಲ್ಲಿ ಆಯೋಜಿಸಿರುವ ಬೃಹತ್ ರೋಡ್ ಶೋ ಮತ್ತು ಯುವ ಸಮಾವೇಶಕ್ಕೆ ಶಿರಹಟ್ಟಿ ಮತಕ್ಷೇತ್ರದ ಪ್ರತಿ ಗ್ರಾಮದಿಂದ ಕಾರ್ಯಕರ್ತರನ್ನು ಕರೆದುಕೊಂಡು ಹೋಗುವ ಕಾರ್ಯಕ್ಕೆ ರೂಪುರೇಷೆ ಹಾಕಿಕೊಳ್ಳಲಾಗಿದೆ. ಕ್ಷೇತ್ರದ ಜನರ ಬೇಕು–ಬೇಡಿಕೆಗಳ ಅರಿವಿರುವ ಕನಸುಗಾರ ಬಸವರಾಜ ಬೊಮ್ಮಾಯಿ ಅವರನ್ನು ಗೆಲ್ಲಿಸಿದರೆ ಅವರು ಕೇಂದ್ರ ಮಂತ್ರಿಯಾಗುತ್ತಾರೆ ಮತ್ತು ನರೇಂದ್ರ ಮೋದಿ ಮತ್ತೆ ಪ್ರಧಾನಿಯಾಗುವರು. ಕ್ಷೇತ್ರದ ಜನರು ಉದ್ಯೋಗವಿಲ್ಲದೇ ಅಲೆಯುವುದನ್ನು ತಪ್ಪಿಸಲು ಕೈಗಾರಿಕೋದ್ಯಮ ಸ್ಥಾಪನೆ, ನೀರಿನ ಸಮಸ್ಯೆ ಬಗೆಹರಿಸುವುದು, ಉತ್ತಮ ಗುಣಮಟ್ಟದ ರಸ್ತೆ ಸೇರಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಉದ್ದೇಶವನ್ನು ಬಸವರಾಜ ಬೊಮ್ಮಾಯಿ ಹೊಂದಿದ್ದಾರೆ ಎಂದರು.

ಸಭೆಯಲ್ಲಿ ಶಿರಹಟ್ಟಿ ಮಂಡಲದ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಉಮೇಶಗೌಡ ಪಾಟೀಲ ಮಾತನಾಡಿ, ಗದಗನಲ್ಲಿ ನಡೆಯುವ ಬೈಕ್ ರ್‍ಯಾಲಿಗೆ ಯುವ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಸೇರಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಜೆಡಿಎಸ್ ತಾಲೂಕಾಧ್ಯಕ್ಷ ಪ್ರವೀಣ ಬಾಳಿಕಾಯಿ, ನಿಂಗಪ್ಪ ಬನ್ನಿ, ಶಕ್ತಿ ಕತ್ತಿ, ಅನೀ ಮುಳಗುಂದ, ನವೀಣ ಬೆಳ್ಳಟ್ಟಿ, ಬಸವರಾಜ ಚಕ್ರಸಾಲಿ, ಜಾನು ಲಮಾಣಿ, ಗಂಗಾಧರ ಮೆಣಸಿಕಾಯಿ ಸೇರಿದಂತೆ ಪಕ್ಷದ ಪ್ರಮುಖರು, ವಿವಿಧ ಮೋರ್ಚಾದ ಪದಾಧಿಕಾರಿಗಳು, ಚುನಾಯಿತ ಪ್ರತಿನಿಧಿಗಳು, ಕಾರ್ಯಕರ್ತರು ಪಾಲ್ಗೊಂಡಿದ್ದರು.


### ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನೀಲಗುಂದ ಮಾಹಿತಿ

## ಕಾಲರಾ ಕಾಯಿಲೆ ಹರಡದಂತೆ ಮುನ್ನೆಚ್ಚರಿಕೆ ಕ್ರಮ

■ **ವಿಜಯಸಾಕ್ಷಿ ಸುದ್ದಿ, ಗದಗ**

ಕಾಲರಾ ಪ್ರಕರಣಗಳು ವರದಿಯಾಗುತ್ತಿರುವ ಹಿನ್ನೆಲೆಯಲ್ಲಿ ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನೀಲಗುಂದ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಕಾಲರಾವು ವಿಬ್ರಿಯೋ ಕಾಲರಾ ಎಂಬ ಬ್ಯಾಕ್ಟೀರಿಯಾದಿಂದ ಹರಡುವ ಕಾಯಿಲೆಯಾಗಿದ್ದು, ಈ ಬ್ಯಾಕ್ಟೀರಿಯಾ ಕಲುಷಿತ ನೀರನ್ನು ಕುಡಿಯುವುದರಿಂದ ಮತ್ತು ಕಲುಷಿತ ಆಹಾರ ಸೇವಿಸುವುದರ ಮುಖಾಂತರ ಪ್ರಸರಣವಾಗುತ್ತದೆ. ಇದರಿಂದ ಅತಿಸಾರ, ವಾಕರಿಕೆ, ವಾಂತಿ, ನಿರ್ಜಲೀಕರಣ ಮತ್ತು ಸ್ನಾಯು ಸೆಳೆತದಂತಹ ಸಮಸ್ಯೆಗಳು ಉದ್ಭವಿಸುತ್ತವೆ. ಸಾರ್ವಜನಿಕರು ಕಾಲರಾ ರೋಗ ಹರಡದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸುವಂತೆ ಕೋರಿದ್ದಾರೆ.



ಮಾಡಬೇಕಾಗಿರುವುದು: ಕುದಿಸಿ ಆರಿಸಿದ ನೀರನ್ನು ಕುಡಿಯುವುದು. ಸಾರ್ವಜನಿಕರು ನೀರಿನ ಕೊಳಾಯಿ ಮತ್ತು ಸ್ಥಳವನ್ನು ಸ್ವಚ್ಛವಾಗಿ ಇಡುವುದು. ತಾಜಾ ಹಣ್ಣುಗಳು, ತರಕಾರಿಗಳನ್ನು ಮತ್ತು ಆಹಾರ ಪದಾರ್ಥಗಳನ್ನೇ ಉಪಯೋಗಿಸುವುದು. ಊಟ ತಯಾರಿಸುವ ಮತ್ತು ಊಟ ಮಾಡುವ ಮುನ್ನ ಕೈಗಳನ್ನು ಸಾಬೂನು ಮತ್ತು ನೀರಿನಿಂದ ಸ್ವಚ್ಛಗೊಳಿಸುವುದು. ಶೌಚಾಲಯವನ್ನು ಉಪಯೋಗಿಸುವ ಮುಂಚೆ ಮತ್ತು ನಂತರ ಕೈಗಳನ್ನು ಸಾಬೂನಿನಿಂದ ಸ್ವಚ್ಛಗೊಳಿಸುವುದು. ಸಿದ್ಧಪಡಿಸಿದ ಆಹಾರ ಪದಾರ್ಥಗಳ ಮೇಲೆ ಕ್ರಿಮಿ–ಕೀಟಗಳು ಕುಳಿತುಕೊಳ್ಳದಂತೆ ಸದಾ ಮುಚ್ಚಳದಿಂದ ಮುಚ್ಚಿಡುವುದು. ನಿಮ್ಮ ಮನೆ ಮತ್ತು ಸುತ್ತ ಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಡುವುದು. ಚಹಾ ಅಂಗಡಿಗಳಲ್ಲಿ ಶುದ್ಧ ಕುಡಿಯುವ ನೀರನ್ನೇ ಉಪಯೋಗಿಸುವುದು ಹಾಗೂ ಸ್ವಚ್ಛತೆಯನ್ನು ಕಾಪಾಡುವುದು.

ಮಾಡಬಾರದ್ದು: ಸೋರಿಕೆ ಇರುವ ಕೊಳಾಯಿ ನೀರನ್ನು ಕುಡಿಯಬಾರದು. ಪಾದಚಾರಿ ರಸ್ತೆಗಳಲ್ಲಿ, ರಸ್ತೆ ಬದಿಗಳಲ್ಲಿ ಮಾರಾಟ ಮಾಡುವ ತಿನಿಸುಗಳು ಹಾಗೂ ತಳ್ಳು ಗಾಡಿಗಳಲ್ಲಿ ಮಾರುವ, ಕತ್ತರಿಸಿದ ಹಣ್ಣು, ಪದಾರ್ಥಗಳನ್ನು ತಿನ್ನಬಾರದು. ಧೂಳು, ನೊಣ, ಜಿರಳೆಗಳು ಇತರೇ ಕೀಟಗಳು ಮುತ್ತುವಂತೆ ತೆರೆದಿಟ್ಟಿರುವ ಆಹಾರ ಪದಾರ್ಥಗಳನ್ನು ಸೇವಿಸಬಾರದು. ಕಸ ಮತ್ತು ಇತರೆ ತ್ಯಾಜ್ಯ ವಸ್ತುಗಳನ್ನು ರಸ್ತೆ ಬದಿ, ಪಾದಚಾರಿ ರಸ್ತೆ, ಮೋರಿಯಲ್ಲಿ ಹಾಕಬಾರದು. ಹಾಕಿದಲ್ಲಿ ಕ್ರಿಮಿಕೀಟಗಳು ಆಕರ್ಷಿಸಿ ಕರಳುಬೇನೆ/ಕಾಲರಾ ಬರುವ ಸಂಭವವಿರುತ್ತವೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಕೋರಿದ್ದಾರೆ.

### ಪಾಲಿಕೊಪ್ಪದ ಧರ್ಮಜಾಗೃತಿ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

## ದೇವರ ಮೇಲಿನ ನಂಬಿಕೆಯೇ ಆಶಾದೀಪ

■ **ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ದೇಶ ಮತ್ತು ಧರ್ಮ ಮನುಷ್ಯನ ಎರಡು ಕಣ್ಣು. ದೇಶ ಉಳಿದರೆ ಧರ್ಮ ಸಂಸ್ಕೃತಿ ಉಳಿದು ಬರಲು ಸಾಧ್ಯ. ದೇವರ ಮೇಲಿನ ನಂಬಿಕೆ ಬಾಳಿಗೆ ಶಾಶ್ವತ ಆಶಾದೀಪ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಪಾಲಿಕೊಪ್ಪ ಗ್ರಾಮದಲ್ಲಿ ಶ್ರೀ ದುರ್ಗಾದೇವಿ ಮತ್ತು ಶ್ರೀ ಕರಿಯಮ್ಮದೇವಿ ನೂತನ ದೇವಸ್ಥಾನದ ಲೋಕಾರ್ಪಣೆ, ನೂತನ ಗೋಪುರ ಕಳಸಾರೋಹಣ, ಪ್ರಾಣ ಪ್ರತಿಷ್ಠಾಪನೆ, ಶ್ರೀ ನಂದೀಶ್ವರ ಸ್ವಾಮಿ ಮಹಾರಥೋತ್ಸವ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.



ಭಾವೈಕ್ಯತೆ ಮತ್ತು ಅಧ್ಯಾತ್ಮ ಜ್ಞಾನ ಭಾರತದ ಉಸಿರು. ಆಧುನಿಕ ಯುಗದಲ್ಲಿ ಪ್ರಗತಿಪರ ವಿಚಾರ ಧಾರೆಗಳ ಹೆಸರಿನಲ್ಲಿ ಭಾರತೀಯ ಉತ್ಕೃಷ್ಟ ಸಂಸ್ಕೃತಿ ನಾಶ ಮಾಡುವ ಸಂಚು ನಡೆಯುತ್ತಿದೆ. ದೇಹವನ್ನು ದುಡಿಮೆಗೆ, ಮನಸ್ಸನ್ನು ಭಗವಂತನಿಗೆ ಅರ್ಪಿಸಿ ನಡೆದಾಗ ಜೀವನ ಸಾರ್ಥಕ. ಸುಖದ ಮೂಲ ಧರ್ಮ ಪರಿಪಾಲನೆಯಲ್ಲಿದೆ. ಮಾನವ ಪರಿಪೂರ್ಣದೆಡೆಗೆ ಪಯಣಿಸುವುದೇ ನಿಜವಾದ ಧರ್ಮ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಅಹಿಂಸಾ, ಸತ್ಯ, ಅಸ್ತೇಯ, ಬ್ರಹ್ಮಚರ್ಯ, ದಯಾ, ಕ್ಷಮಾ, ದಾನ, ಪೂಜಾ ಮತ್ತು ಧ್ಯಾನ ಎಂಬ ದಶಸೂತ್ರಗಳು ಎಲ್ಲರ ಬಾಳಿಗೆ ದಾರಿದೀಪ.


ವೀರಶೈವ ಧರ್ಮ ಕಾಯಕ ಮತ್ತು ದಾಸೋಹದ ಮೂಲಕ ಭಾವೈಕ್ಯತೆ ಸಾಮರಸ್ಯ ಬೆಳೆಸಲು ಪ್ರಯತ್ನಿಸಿದೆ. ಶುದ್ಧ ಹೃದಯವು ಭಗವಂತನ ದರ್ಶನಕ್ಕೆ ಹೋಗುವ ಹೆಬ್ಬಾಗಿಲು. ಮನುಷ್ಯನಲ್ಲಿರುವ ಅಸುರೀ ಗುಣಗಳು ನಾಶವಾಗಿ ದೈವೀ ಗುಣಗಳು ಬಲಗೊಳ್ಳಬೇಕು. ಪ್ರಾಪಂಚಿಕ ಸ್ನೇಹ ಸಂಬಂಧಗಳು ಕಾಲಾಂತರದಲ್ಲಿ ಶಿಥಿಲಗೊಳ್ಳಬಹುದು. ಆದರೆ ಗುರು ಶಿಷ್ಯರ ಸಂಬಂಧ ನಿರಂತರ ಮತ್ತು ಚಿರಂತನವಾದುದು. ಲಿಂ.ಶ್ರೀಮದ್ ರಂಭಾಪುರಿ ವೀರಗಂಗಾಧರ ಜಗದ್ಗುರುಗಳು ಸಾರಿದ ಮಾನವ ಧರ್ಮಕ್ಕೆ ಜಯವಾಗಲಿ ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂಬ ಸಂದೇಶ ಎಂದೆಂದಿಗೂ ಪ್ರಸ್ತುತವಾಗಿದೆ. ಗ್ರಾಮದಲ್ಲಿ ಅಭಿವೃದ್ಧಿ ಕಾರ್ಯಗಳು ನಡೆದಿರುವುದು ಸಮಾಧಾನ ತಂದಿದೆ ಎಂದರು.

ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಸಮಾರಂಭದ ನೇತೃತ್ವ ವಹಿಸಿದ್ದರು. ಕಲಾದಗಿಯ ಗಂಗಾಧರ ಶಿವಾಚಾರ್ಯರು ಸಮ್ಮುಖ ವಹಿಸಿದ್ದರು. ಶಿವಾನಂದಸ್ವಾಮಿ ಹಿರೇಮಠ, ಕುಮಾರಸ್ವಾಮಿ ಹಿರೇಮಠ, ದೇವನಗೌಡ ಪಾಟೀಲ, ಗಂಗನಗೌಡ ಪಾಟೀಲ, ಶಿವನಗೌಡ ಧರ್ಮಗೌಡ್ರ, ನಾಗರಾಜ ಅಂಗಡಿ, ಶ್ರೀಕಂಠಗೌಡ್ರು ಹಿರೇಗೌಡ್ರ, ಮುದಕಪ್ಪ ಹರಕುಣಿ, ಬಿ.ಸಿ.ಕರಿಯಣ್ಣನವರ, ಭರಮಪ್ಪ ಮುಗಳಿ, ಸಿ.ವೈ.ಹಿರೇಗೌಡ್ರ, ಚನ್ನಪ್ಪ ಕಮಡೊಳ್ಳಿ ಸಮಾರಂಭದಲ್ಲಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು. ಸವಣೂರಿನ ಡಾ.ಗುರುಪಾದಯ್ಯ ಸಾಲಿಮಠ ನಿರೂಪಿಸಿದರು.

**ಭಾವೈಕ್ಯತೆಗೆ ಸಾಕ್ಷಿ**

ಸಮಾರಂಭಕ್ಕೂ ಮುನ್ನ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ಸಡಗರ ಸಂಭ್ರಮದಿಂದ ಜರುಗಿತು. ಕಳಸ ಕನ್ನಡಿಯೊಂದಿಗೆ ಸುಮಂಗಲೆಯರು, ಪೂರ್ಣ ಕುಂಭ ಹೊತ್ತ ಮಹಿಳೆಯರು ಮಂಗಲ ವಾದ್ಯ ಸೇರಿದಂತೆ ವಿವಿಧ ವಾದ್ಯ ತಂಡಗಳು ಭಾಗವಹಿಸಿದ್ದರು. ಅಡ್ಡಪಲ್ಲಕ್ಕಿ ಮಹೋತ್ಸವದಲ್ಲಿ ಮುಸ್ಲಿಂ ಮಹಿಳೆಯರು ಭಾಗವಹಿಸಿದ್ದು ಭಾವೈಕ್ಯತೆಗೆ ಸಾಕ್ಷಿಯಾಯಿತು.

## ಯುವಜನತೆ ಈ ದೇಶದ ಸಂಪತ್ತು



■ **ವಿಜಯಸಾಕ್ಷಿ ಸುದ್ದಿ, ಗದಗ**

ಯುವಕರು ದುಶ್ಚಟಗಳಿಂದ ಮುಕ್ತರಾಗಿ ಕ್ರೀಡೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ. ಸೋಲು–ಗೆಲುವು ಮುಖ್ಯವಲ್ಲ. ಎರಡನ್ನೂ ಸಮನಾಗಿ ಸ್ವೀಕರಿಸಿ ಎಂದು ಬಿಜೆಪಿಯ ಯುವ ಮುಖಂಡ ವಸಂತ ಪಡಗದ ಯುವಕರಿಗೆ ಕರೆ ನೀಡಿದರು.

ಅವರು ಗದಗ ನಗರದ ರೈಮತ್ ನಗರದ ಅಕ್ಕಾ ತಂಗಿ ಮೈದಾನದಲ್ಲಿ ಯುಗಾದಿ ಹಬ್ಬದ ಅಂಗವಾಗಿ ಬ್ಲೂ ಸ್ಟಾರ್ ಅಕಾಡೆಮಿ ಆಯೋಜನೆ ಮಾಡಿದ್ದ ಕ್ರಿಕೆಟ್ ಪಂದ್ಯಾವಳಿಯಲ್ಲಿ ವಿಜೇತ ತಂಡಗಳಿಗೆ ಬಹುಮಾನ ವಿತರಿಸಿ ಮಾತನಾಡಿದರು.

ಜೀವನದಲ್ಲಿ ಸೋಲು–ಗೆಲುವನ್ನು ಸಮನಾಗಿ ಸ್ವೀಕರಿಲು ಶಕ್ತರಾಗುತ್ತೀರಿ. ಸದೃಢವಾದ ಶರೀರದಲ್ಲಿ ಸದೃಢವಾದ ಮನಸ್ಸು ಇರುತ್ತದೆ. ಸದೃಢ ಯುವಜನತೆ ಈ ದೇಶದ ಸಂಪತ್ತು ಎಂದು ಅವರು ಹೇಳಿದರು.

ಪಂದ್ಯಾವಳಿಯಲ್ಲಿ ಒಟ್ಟು 15 ತಂಡಗಳು ಭಾಗವಹಿಸಿದ್ದವು. ಈ ಪೈಕಿ ಗಂಗಾಪೂರ ಪೇಟೆಯ ಬ್ರದರ್ಸ್ ತಂಡ ಪ್ರಥಮ ಸ್ಥಾನ ಪಡೆದರೆ, ದ್ವಿತೀಯ ಬಹುಮಾನವನ್ನು ಎಸ್.ಎಂ. ಕೃಷ್ಣಾ ನಗರದ ಸಿದ್ಧಿವಿನಾಯಕ ತಂಡ ಪಡೆದುಕೊಂಡಿತು. ತೃತೀಯ ಬಹುಮಾನವನ್ನು ಸಂಜಯ ಗಾಂಧಿ ಕಾಲೋನಿಯ ಬ್ಲೂ ಸ್ಟಾರ್ ತಂಡ ಪಡೆದುಕೊಂಡಿತು. ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಸುದೀಪ್ ಕೊಡವೆ, ಯಶಮಂತ ಬಳ್ಳಾರಿ, ಇರ್ಫಾನ್ ಬಳ್ಳಾರಿ, ನಾಗರಾಜ ಗುಡ್ಡನಾಯ್ಕರ್ ಮುಂತಾದವರು ಪಾಲ್ಗೊಂಡಿದ್ದರು.

## ಮೃತ ವ್ಯಕ್ತಿಯ ಪತ್ತೆಗೆ ಮನವಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಗ್ರಾಮೀಣ ಪೊಲೀಸ್ ಠಾಣೆಯ ಯು.ಡಿ.ನಂಬರ್ 18/2024, ಕಲಂ: 174 ಸಿಆರ್‌ಪಿಸಿ.ನಂತೆ ಏಪ್ರಿಲ್ 9ರಂದು ಮುಂಜಾನೆ 10 ಗಂಟೆಯಿಂದ ಸಂಜೆ 4 ಗಂಟೆಯ ನಡುವಿನ ಅವಧಿಯಲ್ಲಿ ಬಿಂಕದಕಟ್ಟಿ ಹತ್ತಿರ ಇರುವ ಜೈ ಹಿಂದ್ ಹೋಟೇಲ್‌ನ ಮುಂದೆ ಇರುವ ರಾಷ್ಟ್ರೀಯ ಹೆದ್ದಾರಿಯ ಡಿವೈಡರ್‌ನಲ್ಲಿ ಅನಾರೋಗ್ಯದಿಂದ ಅಥವಾ ಯಾವುದೋ ಖಾಯಿಲೆಯಿಂದ ಅಪರಿಚಿತ ವ್ಯಕ್ತಿಯೊಬ್ಬ ಮರಣ ಹೊಂದಿದ್ದು, ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಕೊಂಡಿದ್ದಾರೆ.



ಮೃತ ಅಪರಿಚಿತ ವ್ಯಕ್ತಿಯು 45–50 ವರ್ಷ ವಯಸ್ಸಿನವರಾಗಿದ್ದು, 5 ಫೂಟ್ 1 ಇಂಚ್ ಎತ್ತರ, ಸಾದಾ ಗಪ್ಪು ಮೈ ಬಣ್ಣ, ತೆಳ್ಳನೆಯ ಮೈಕಟ್ಟು, ಅಗಲವಾದ ಹಣೆ, ನೀಟಾದ ಮೂಗು, ತಲೆಯಲ್ಲಿ ಕಪ್ಪು–ಬಿಳಿ ಕೂದಲು, ಮುಖದಲ್ಲಿ ಬಿಳಿ ಗಡ್ಡ ಬಿಟ್ಟಿರುತ್ತಾನೆ. ನೇರಳೆ ಬಣ್ಣದ ಟಿ ಶರ್ಟ್ ಮತ್ತು ಬೂದು ಬಣ್ಣದ ನೈಟ್ ಪ್ಯಾಂಟ್ ಧರಿಸಿರುತ್ತಾನೆ.

ಸದರಿ ಮೃತ ವ್ಯಕ್ತಿಯ ಬಗ್ಗೆ ಮಾಹಿತಿ ತಿಳಿದುಬಂದಲ್ಲಿ ಗದಗ ಗ್ರಾಮೀಣ ಪೊಲೀಸ್ ಠಾಣೆ– 08372–278213, 9480804431, ಇ–ಮೇಲ್: ruralgdg@ksp.gov.in ಅಥವಾ ಗದಗ ಕಂಟ್ರೋಲ್ ರೂಮ್–08372–238300, 9480804400 ಇ–ಮೇಲ್ dcgdg@ksp.gov.in ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

## ಕೃಷಿ ಚಟುವಟಿಕೆಗಳಿಗೆ ಸಲಹೆ

■ **ವಿಜಯಸಾಕ್ಷಿ ಸುದ್ದಿ, ಗದಗ**

2024–25ನೇ ಸಾಲಿನ ಮುಂಗಾರು ಹಂಗಾಮಿಗೆ ಭೂಮಿ ತಯಾರಿಸಲು ಜಿಲ್ಲೆಯ ಎಲ್ಲಾ ರೈತರು ಮಾಗಿ ಉಳುಮೆ ಕೈಗೊಳ್ಳಬೇಕು. ಮಣ್ಣಿನ ಸವಕಳಿಯನ್ನು ತಪ್ಪಿಸಲು ಹಾಗೂ ನೀರಿನ ಹರಿಯುವಿಕೆಯನ್ನು ಕಡಿಮೆ ಮಾಡಲು ಇಳಿಜಾರಿಗೆ ಅಡ್ಡಲಾಗಿ ಬದು ನಿರ್ಮಾಣ ಮಾಡಬೇಕು ಎಂದು ಗದಗ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರು ರೈತರಲ್ಲಿ ಮನವಿ ಮಾಡಿದ್ದಾರೆ.ಹಿಂದಿನ ಹಂಗಾಮಿನ ಬೆಳೆಗಳ ಉಳಿಕೆಗಳನ್ನು ಸುಡಬಾರದು. ಅವುಗಳನ್ನು ಕಂಪೋಸ್ಟ್ ಮಾಡಲು ಅಥವಾ ಎರೆಹುಳು ಗೊಬ್ಬರ ತಯಾರಿಸಲು ಉಪಯೋಗಿಸಬೇಕು. ಎರೆಹುಳು ತೊಟ್ಟಿಯಲ್ಲಿ ಕನಿಷ್ಟ ಶೇ.75 ತೇವಾಂಶ ಇರುವ ಹಾಗೆ ನೋಡಿಕೊಳ್ಳಬೇಕು. ದನ ಕರುಗಳಿಗೆ ಬಿಸಿಲಿನ ತಾಪದಿಂದ ರಕ್ಷಿಸಲು ಸಾಕಷ್ಟು ನೆರಳು ಹಾಗೂ ಕುಡಿಯಲು ನೀರು ಇರುವ ಹಾಗೆ ನೋಡಿಕೊಳ್ಳಬೇಕು.

ಜಿಲ್ಲೆಯ ಗದಗ ಹಾಗೂ ಮುಂಡರಗಿ ತಾಲೂಕುಗಳ ಕೆಲವೆಡೆ ಬೇಸಿಗೆಯಲ್ಲಿ ಸೂರ್ಯಕಾಂತಿ ಬಿತ್ತನೆ ಕೈಗೊಳ್ಳುವ ವಾಡಿಕೆಯಿದೆ. ಆದರೆ, ಪ್ರಸ್ತುತ ಉಷ್ಣಾಂಶವು 40 ಡಿಗ್ರಿಗಿಂತ ಅಧಿಕ ಇರುವುದರಿಂದ ಹಾಗೂ ನೀರಿನ ಕೊರತೆ ಇರುವುದರಿಂದ ಸೂರ್ಯಕಾಂತಿ ಬೆಳವಣಿಗೆ ಕುಂಠಿತವಾಗುತ್ತದೆ, ಕೀಟ ಮತ್ತು ರೋಗ ಬಾಧೆ ಹೆಚ್ಚಾಗುವ ಸಾಧ್ಯತೆಯಿದೆ. ಕಾರಣ, ಸೂರ್ಯಕಾಂತಿ ಬಿತ್ತನೆ ಮಾಡಬಾರದೆಂದು ಜಂಟಿ ಕೃಷಿ ನಿರ್ದೇಶಕರು ಮಾಹಿತಿ ನೀಡಿದ್ದಾರೆ.

## ಏ.14ರಂದು ಡಾ. ಬಿ.ಆರ್.ಅಂಬೇಡ್ಕರ್ ಜಯಂತಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 133ನೇ ಜಯಂತಿಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಏಪ್ರಿಲ್ 14 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾಡಳಿತ ಭವನ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಮಾದರಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಜಯಂತಿಯನ್ನು ಸರಳವಾಗಿ ಆಚರಿಸಲಾಗುತ್ತದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಶಾಂತ್ ವರಗಪ್ಪನವರ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka